ಸಂಪುಟ : 10 ಸಂಚಿಕೆ: 302 ಪುಟ : 4+2 ಬೆಲೆ: 3.00 ಶನಿವಾರ ಜನವರಿ 17 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 302 Pages : 4+2 Price : 3.00 Saturday January 17 2026 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

### ಲಕ್ಕುಂಡಿಯಲ್ಲಿ ಉತ್ಖನನ ಕಾರ್ಯಕ್ಕೆ ಚಾಲನೆ ನೀಡಿದ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್

# ನಾಜೂಕಿನಿಂದ ಉತ್ಖನನ ಪ್ರಕ್ರಿಯೆ ನಡೆಸಿ



> ಗ್ರಾಮದ ಸ್ಥಳಾಂತರ ಉತ್ಖನನದಲ್ಲಿ ಸಿಗುವ ಕುರುಹುಗಳ ಮೇಲೆ ನಿರ್ಧಾರವಾಗುತ್ತದೆ. ಉತ್ಖನನದಲ್ಲಿ ಅಂಥದ್ದೇನಾದರೂ ಕಂಡುಬಂದಲ್ಲಿ ಸ್ಥಳಾಂತರ ಮಾಡುತ್ತೇವೆ. ಗ್ರಾಮದ ಜನರ ಸಂಪೂರ್ಣ ಸಹಕಾರದಿಂದ ಉತ್ಖನನ ನಡೆಯುತ್ತಿದೆ. ಭೂತಾಯಿ ಒಡಲೊಳಗೆ ಏನು ಹುದುಗಿದೆಯೋ ಕಾದು ನೋಡಬೇಕಿದೆ.
>
> – ಸಿ.ಎನ್. ಶ್ರೀಧರ್. ಜಿಲ್ಲಾಧಿಕಾರಿಗಳು, ಗದಗ.



■ **ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಿನ ಲಕ್ಕುಂಡಿಯ ಕೋಟೆ ವೀರಭದ್ರೇಶ್ವರ ದೇವಸ್ಥಾನದ ಆವರಣದಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಅವರು ಶುಕ್ರವಾರ ಉತ್ಖನನಕ್ಕೆ ಚಾಲನೆ ನೀಡಿದರು.

ಪುರಾತತ್ವ ಇಲಾಖೆಯ ನಿವೃತ್ತ ಅಧೀಕ್ಷಕ ಹಾಗೂ ಉತ್ಖನನದ ನಿರ್ದೇಶಕ ಟಿ.ಎಂ. ಕೇಶವ ಅವರ ನೇತೃತ್ವದಲ್ಲಿ ಉತ್ಖನನ ಆರಂಭವಾಗಿದ್ದು, ಉತ್ಖನನ ಕುರಿತು ಪುರಾತತ್ವ ಅಧಿಕಾರಿಗಳು ಕಾರ್ಮಿಕರಿಗೆ ಮಾಹಿತಿ ನೀಡಿದರು. 20 ಜನ ಮಹಿಳೆಯರು, 10 ಜನ ಪುರುಷರು ಸೇರಿ ಒಟ್ಟು 30 ಕಾರ್ಮಿಕರಿಂದ ಉತ್ಖನನ ಕಾರ್ಯ ಮುಂದುವರಿದಿದ್ದು, ಪುರಾತತ್ವ ಇಲಾಖೆ ಅಧಿಕಾರಿಗಳು ಪ್ರಾಚೀನ ವಸ್ತುಗಳ ಬಗೆಗೆ ಉತ್ಖನನ ಮಾಡುವ ಬಗ್ಗೆ ಕಾರ್ಮಿಕರಿಗೆ ಮಾಹಿತಿ ನೀಡಿ, ನಾಜೂಕಿನಿಂದ ಉತ್ಖನನ ಪ್ರಕ್ರಿಯೆ ನಡೆಸಬೇಕು. ಅಲ್ಲದೇ, ಯಾವುದೇ ವಸ್ತು ಸಿಕ್ಕರೂ ಅದನ್ನು ಅಧಿಕಾರಿಗಳಿಗೆ ತಿಳಿಸಬೇಕು. ಭೂಮಿ ಅಗೆಯುವಾಗ ಸೂಕ್ಷ್ಮತೆ ಇರಲಿ ಎಂದು ಸೂಚನೆ ನೀಡಿದರು.

ಶುಕ್ರವಾರ ಬೆಳಿಗ್ಗೆ 11ರಿಂದ ಆರಂಭವಾದ ಉತ್ಖನನವು ಸಂಜೆ 5.30ರವರೆಗೆ ನಡೆದಿದ್ದು, ದಿನದ ಅಂತ್ಯಕ್ಕೆ ಯಾವುದೇ ಅವಶೇಷಗಳು ಪತ್ತೆಯಾಗಿಲ್ಲ. ಕೋಟೆ ವೀರಭದ್ರೇಶ್ವರ ದೇವಸ್ಥಾನದ ಆವರಣದಲ್ಲಿ 10/10 ಅಡಿಯ ಸುತ್ತಳತೆಯಲ್ಲಿ ನಡೆದ ಉತ್ಖನನದಲ್ಲಿ ಶುಕ್ರವಾರ ಕೇವಲ 1 ಅಡಿ ಆಳದಷ್ಟು ಮಾತ್ರ ಮಣ್ಣು ಅಗೆಯಲಾಗಿದ್ದು, ಇನ್ನೂ ಸುಮಾರು 7ರಿಂದ 8 ಅಡಿ ಆಳ ಅಗೆದರೆ ಏನಾದರೂ ಅವಶೇಷಗಳು, ಆಭರಣ, ವಸ್ತುಗಳು ಸಿಗಬಹುದು ಎಂಬ ನಿರೀಕ್ಷೆ ಇಟ್ಟುಕೊಳ್ಳಲಾಗಿದೆ.

ಪುರಾತತ್ವ ಇಲಾಖೆ, ಜಿಲ್ಲಾಡಳಿತ, ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ನೇತೃತ್ವದಲ್ಲಿ ನಡೆಯುತ್ತಿರುವ ಉತ್ಖನನಕ್ಕೆ ಚಾಲನೆ ನೀಡಿದ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಮಾತನಾಡಿ, ಪುರಾತತ್ವ ಇಲಾಖೆಯ ನಿವೃತ್ತ ಅಧೀಕ್ಷಕ ಹಾಗೂ ಉತ್ಖನನದ ನಿರ್ದೇಶಕ ಟಿ.ಎಂ. ಕೇಶವ ಅವರ ನೇತೃತ್ವದಲ್ಲಿ ಉತ್ಖನನ ಆರಂಭವಾಗಿದೆ. ನಿಧಿ ಸಿಕ್ಕಿರುವ ಬೆನ್ನಲ್ಲೇ ಉತ್ಖನನ ನಡೆಯುತ್ತಿರುವುದು ಕಾಕತಾಳೀಯ. ಸರ್ಕಾರ ಪೂರ್ವ ನಿಗದಿಯಂತೆ ಉತ್ಖನನ ಕಾರ್ಯ ಮಾಡುತ್ತಿದ್ದು, ಭೂಮಿಯ ಒಡಲಿನಲ್ಲಿ ಏನಿದೆ ಎಂದು ಈಗಲೇ ಹೇಳಲು ಸಾಧ್ಯವಿಲ್ಲ. ದೇವಸ್ಥಾನದ ಕುರುಹು ಇರುವ ಬಗ್ಗೆ ಪುರಾತತ್ವ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ. ಅದರಂತೆ ಉತ್ಖನನಕ್ಕೆ ಚಾಲನೆ ಸಿಕ್ಕಿದೆ. ಉತ್ಖನನದ ಸಂದರ್ಭದಲ್ಲಿ ಏನು ಸಿಗುತ್ತದೆ ಎಂದು ಕಾಯ್ದು ನೋಡಬೇಕು ಎಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಲಕ್ಕುಂಡಿ ಪಾರಂಪರಿಕ ಪ್ರದೇಶ ಪ್ರಾಧಿಕಾರದ ಆಯುಕ್ತ ಶರಣು ಗೋಗೇರಿ, ಪ್ರಾಧಿಕಾರದ ರಾಜ್ಯ ಸಮಿತಿ ಸದಸ್ಯ ಸಿದ್ದು ಪಾಟೀಲ, ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ ಕೊಟ್ರೇಶ ವಿಭೂತಿ, ಗ್ರಾ.ಪಂ ಅಧ್ಯಕ್ಷ ಕೆಂಚಪ್ಪ ಪೂಜಾರ, ಪಿಡಿಒ ಅಮೀರ ನಾಯ್ಕ ಸೇರಿ ಹಲವರಿದ್ದರು.

ಲಕ್ಕುಂಡಿ ಗ್ರಾಮದ ಕೋಟೆ ವೀರಭದ್ರೇಶ್ವರ ದೇವಸ್ಥಾನದ ಮುಂಭಾಗದಲ್ಲಿ ಉತ್ಖನನಕ್ಕೂ ಮುನ್ನ ಉತ್ಖನನದ ಜಾಗೆ ಹಾಗೂ ಉತ್ಖನನಕ್ಕೆ ಬೇಕಾಗುವ ಸಲಕರಣೆಗಳಿಗೆ ಪೂಜೆ ಸಲ್ಲಿಸಲಾಯಿತು.

### 25 ಲಕ್ಷ ರೂ. ವೆಚ್ಚದ ಸಿ.ಸಿ ರಸ್ತೆ ಲೋಕಾರ್ಪಣೆಗೊಳಿಸಿದ ಸಚಿವ ಎಚ್.ಕೆ. ಪಾಟೀಲ

# ನಿರೀಕ್ಷಿತ ಪ್ರಮಾಣಕ್ಕಿಂತ ಅಧಿಕ ಅಭಿವೃದ್ಧಿ



> ಕೇಂದ್ರ ಸರ್ಕಾರ ಮನರೇಗಾ ಉದ್ಯೋಗ ಖಾತ್ರಿ ಯೋಜನೆಯ ಕಾನೂನನ್ನು ರದ್ದುಪಡಿಸಿದೆ. ಇದು ಜನಸಾಮಾನ್ಯರ ವಿಕೇಂದ್ರೀಕರಣ ವ್ಯವಸ್ಥೆಗೆ ವಿರುದ್ಧವಾಗಿದೆ. ಈ ಮೊದಲಿದ್ದ ಕಾನೂನು ಹಾಗೂ ಯೋಜನೆ ಮರುಸ್ಥಾಪನೆಯಾಗಲಿ ಎಂದು ಇದೇ ಸಂದರ್ಭದಲ್ಲಿ ಸಚಿವ ಎಚ್.ಕೆ. ಪಾಟೀಲ ಒತ್ತಾಯಿಸಿದರು.

■ **ವಿಜಯಸಾಕ್ಷಿ ಸುದ್ದಿ, ಗದಗ**

ಹುಲಕೋಟಿ, ಬಿಂಕದಕಟ್ಟಿ, ಅಸುಂಡಿ, ಕುರ್ತಕೋಟಿ ಭಾಗದಲ್ಲಿ ನಿರೀಕ್ಷಿತ ಪ್ರಮಾಣಕ್ಕಿಂತ ಅಧಿಕ ಅಭಿವೃದ್ಧಿ ಆಗಿದೆ. ಇದಕ್ಕೆಲ್ಲ ಜನಸಾಮಾನ್ಯರ ಒಗ್ಗಟ್ಟೇ ಕಾರಣವಾಗಿದೆ ಎಂದು ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಅಭಿಪ್ರಾಯಪಟ್ಟರು.

ಗದಗ ತಾಲೂಕಿನ ಹಿರೇಹಂದಿಗೋಳ ಗ್ರಾಮದಲ್ಲಿ 25 ಲಕ್ಷ ರೂ. ಅನುದಾನದಲ್ಲಿ ನಿರ್ಮಾಣವಾದ ಸಿ.ಸಿ ರಸ್ತೆ ಕಾಮಗಾರಿಯನ್ನು ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು. ಗ್ರಾಮೀಣ ಪ್ರದೇಶದಲ್ಲಿನ ಜನರ ಬದುಕಿನ ಜೀವನದ ಗುಣಮಟ್ಟ ಎತ್ತರಕ್ಕೇರಬೇಕು. ಬದುಕು ಹೆಚ್ಚು ಶಕ್ತಿಯುತವಾಗಬೇಕು. ಅವರ ಆರೋಗ್ಯ, ಬದುಕು ಸುಂದರವಾಗಿರಬೇಕೆಂದು ರಾಜ್ಯ ಸರ್ಕಾರ ಪಂಚ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಗೊಳಿಸಿದೆ. ಇದರಿಂದ ಪ್ರತಿ ಕುಟುಂಬಕ್ಕೆ ವಾರ್ಷಿಕವಾಗಿ 60 ಸಾವಿರ ರೂ.ಗಳು ತಲುಪಲಿದ್ದು, ಆರ್ಥಿಕವಾಗಿ ಚೇತರಿಸಿಕೊಳ್ಳಲು ಇದೊಂದು ಉತ್ತಮ ಅವಕಾಶವಾಗಿದೆ ಎಂದರು.

ಬಡತನವನ್ನು ಬೇರು ಸಮೇತ ಕಿತ್ತೊಗೆಯುವ ಸಂಕಲ್ಪದೊಂದಿಗೆ ಪಂಚ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಗೊಳಿಸಲಾಯಿತು. ಇದರಿಂದ ಬಡತನ ದೂರವಾಗಿ ನೆಮ್ಮದಿಯ ಬದುಕು ಕಾಣುವಂತಾಗಿದೆ ಎಂದು ಸಚಿವ ಎಚ್.ಕೆ. ಪಾಟೀಲ ಅಭಿಪ್ರಾಯಪಟ್ಟರು.

ಹಿರೇಹಂದಿಗೋಳ ಗ್ರಾಮಸ್ಥರು ಸಾರ್ವಜನಿಕ ಸಮಸ್ಯೆಗಳು ಹಾಗೂ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಅನುದಾನ ನೀಡುವಂತೆ ಮನವಿ ಸಲ್ಲಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಚಿವ ಎಚ್.ಕೆ. ಪಾಟೀಲ ಅವರು, ಗ್ರಾಮದ ಇನ್ನುಳಿದ ಸಿ.ಸಿ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ 40 ಲಕ್ಷ ರೂ.ಗಳನ್ನು ಮಂಜೂರು ಮಾಡಲಾಗುವುದು. ಏಪ್ರಿಲ್‌ನಲ್ಲಿ ಕೆಲಸ ಆರಂಭಿಸಿ ಜೂನ್ ತಿಂಗಳಿಗೆ ಪೂರ್ಣಗೊಳಿಸಲಾಗುವುದು ಎಂದು ಸ್ಥಳದಲ್ಲೇ ಭರವಸೆ ನೀಡಿದರು. ಅಲ್ಲದೇ ಸ್ಮಶಾನ ಅಭಿವೃದ್ಧಿಗಾಗಿ ಅಗತ್ಯವಿರುವ ಅಷ್ಟೂ ಅನುದಾನವನ್ನು ನೀಡಲಾಗುವುದು. ಇದರೊಂದಿಗೆ ಸಮುದಾಯ ಭವನಕ್ಕೆ 10 ಲಕ್ಷ ರೂ.ಗಳನ್ನು ನೀಡುವುದಾಗಿ ಸಚಿವರು ಇದೇ ಸಂದರ್ಭದಲ್ಲಿ ಗ್ರಾಮಸ್ಥರಿಗೆ ತಿಳಿಸಿದರು. ಈ ಸಂದರ್ಭದಲ್ಲಿ ಬಿಂಕದಕಟ್ಟಿ ಗ್ರಾಮ ಪಂಚಾಯಿತಿ ಅಧ್ಯಕ್ಷ ನಿಂಗಪ್ಪ ಪರಪ್ಪನವರ, ಉಪಾಧ್ಯಕ್ಷೆ ದ್ಯಾಮವ್ವ ಯರಟ್ಟಿ, ರವಿ ಮೂಲಿಮನಿ, ಎಂ.ಐ. ಪಾಟೀಲ, ವಿ.ಬಿ. ಜಕ್ಕನಗೌಡ್ರ ಎಂ.ಬಿ. ಚುರ್ಚಿಹಾಳ, ಡಿ.ಬಿ. ಕುಲಕರ್ಣಿ, ಎಂ.ಎಸ್. ಪಾಟೀಲ, ಬಸಯ್ಯ ಯಲಬುರ್ಗಿಮಠ, ಎಸ್.ಎನ್. ಪಾಟೀಲ, ಬಿ.ಟಿ. ಖಾನಾಪುರ, ಆರ್.ಎಚ್. ಪಾಟೀಲ, ಎಂ.ಎಚ್. ಮಡಿಕೇರಿ ಸೇರಿದಂತೆ ಗ್ರಾಮದ ಹಿರಿಯರು, ಜನಪ್ರತಿನಿಧಿಗಳು, ಗಣ್ಯರು ಉಪಸ್ಥಿತರಿದ್ದರು.

### ಕುಡುವಕ್ಕಲಿಗ ಸಮಾಜದಿಂದ ಸಚಿವ ಎಚ್.ಕೆ. ಪಾಟೀಲರಿಗೆ ಸನ್ಮಾನ

# ಕುಡುವಕ್ಕಲಿಗರ ಭವನ ರಾಜ್ಯದಲ್ಲಿಯೇ ಮಾದರಿಯಾಗಲಿ



■ **ವಿಜಯಸಾಕ್ಷಿ ಸುದ್ದಿ, ಗದಗ**

ಅಖಿಲ ಕರ್ನಾಟಕ ಲಿಂಗಾಯತ ಕುಡುವಕ್ಕಲಿಗರ ಸಂಘವು ಗದುಗಿನ ಬಿಂಕದಕಟ್ಟಿ ಪ್ರಾಣಿ ಸಂಗ್ರಹಾಲಯದ ಬಳಿ ನಿರ್ಮಿಸುತ್ತಿರುವ ಕುಡುವಕ್ಕಲಿಗರ ಭವನವು ಅತ್ಯಾಧುನಿಕ ಸೌಲಭ್ಯಗಳೊಂದಿಗೆ ರಾಜ್ಯದಲ್ಲಿಯೇ ಮಾದರಿ ಆಗುವಂತೆ ನಿರ್ಮಾಣಗೊಳ್ಳಲಿ ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಆಶಿಸಿದರು.

ಅವರು ಗುರುವಾರ ಗದಗ ಜಿಲ್ಲಾ ಕಾಂಗ್ರೆಸ್ ಕಚೇರಿಯ ಪ್ರಾಂಗಣದಲ್ಲಿ ಅಖಿಲ ಕರ್ನಾಟಕ ಲಿಂಗಾಯತ ಕುಡುವಕ್ಕಲಿಗರ ಸ ಂ ಘ ದ

▸▸ 4ನೇ ಪುಟಕ್ಕೆ

> ಅಖಿಲ ಕರ್ನಾಟಕ ಲಿಂಗಾಯತ ಕುಡುವಕ್ಕಲಿಗರ ಸಂಘದ ರಾಜ್ಯ ಅಧ್ಯಕ್ಷ ಶಿವಕುಮಾರ ಪಾಟೀಲ ಮಾತನಾಡಿ, ಕುಡುವಕ್ಕಲಿಗರ ಭವನವನ್ನು ರಾಜ್ಯದಲ್ಲಿಯೇ ಮಾದರಿ ಆಗುವ ರೀತಿಯಲ್ಲಿ ನಿರ್ಮಿಸಲು ಮೂರುವರೆ ಕೋಟಿ ರೂ.ಗಳ ಅಂದಾಜು ವೆಚ್ಚದ ಯೋಜನೆ ರೂಪಿಸಲಾಗಿತ್ತು. ಭೂಮಿ ಪೂಜೆಗೆ ಆಗಮಿಸಿದ್ದ ಸಚಿವರು ಸ್ಥಳೀಯ ಶಾಸಕರ ಅನುದಾನದಿಂದ 20 ಲಕ್ಷ ರೂ.ಗಳನ್ನು ಬಿಡುಗಡೆ ಮಾಡಿದ್ದರು. ಸಂಘಟನೆ ಮತ್ತು ಸಮಾಜವು ಬೇರೆ ಮೂಲಗಳಿಂದ ಸಂಪನ್ಮೂಲ ಕ್ರೋಢೀಕರಣಕ್ಕೆ ಪ್ರಯತ್ನಿಸಿತ್ತು. ಕಟ್ಟಡ ನಿರ್ಮಾಣ ಮಂದಗತಿಯಲ್ಲಿ ಸಾಗುತ್ತಿರುವದನ್ನು ವೀಕ್ಷಿಸಿ ಸಚಿವ ಎಚ್.ಕೆ. ಪಾಟೀಲರು ಮುಖ್ಯಮಂತ್ರಿಗಳ ಮನವೊಲಿಸಿ ಅನುದಾನವನ್ನು ಬಿಡುಗಡೆ ಮಾಡಿರುವದು ಸಮಾಜಬಾಂಧವರಿಗೆ ಆನೆಬಲ ಬಂದಂತಾಗಿದೆ ಎಂದರು.

# ರವಿ ದಂಡಿನರಿಗೆ ಪದವೀಧರ ಕ್ಷೇತ್ರದ ಟಿಕೆಟ್ ನೀಡಿ

■ **ವಿಜಯಸಾಕ್ಷಿ ಸುದ್ದಿ, ಗದಗ**

ಪಶ್ಚಿಮ ಪದವೀಧರ ಕ್ಷೇತ್ರದ ಚುನಾವಣೆಯಲ್ಲಿ ಸ್ಪರ್ಧಿಸಲು ಬಿಜೆಪಿ ಪಕ್ಷದಿಂದ ಕನಕದಾಸ ಶಿಕ್ಷಣ ಸಂಸ್ಥೆಯ ಮುಖ್ಯಸ್ಥ ರವಿ ದಂಡಿನ ಅವರಿಗೆ ಟಿಕೆಟ್ ನೀಡಬೇಕು ಎಂದು ನಿವೃತ್ತಿ ಪ್ರಚಾರ ಉಮೇಶ ಹಿರೇಮಠ ಹೇಳಿದರು.

ನಗರದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಗದಗ, ಹಾವೇರಿ, ಉತ್ತರ ಕನ್ನಡ, ಧಾರವಾಡ ಈ ನಾಲ್ಕು ಜಿಲ್ಲೆಯನ್ನೊಳಗೊಂಡ ಪಶ್ಚಿಮ ಪದವೀಧರ ಕ್ಷೇತ್ರದಲ್ಲಿ ಕನಕದಾಸ ಶಿಕ್ಷಣ ಸಮಿತಿ ಸಂಸ್ಥೆ ದಶಕಗಳಿಂದ ಶಿಕ್ಷಣದಲ್ಲಿ ಸೇವೆ ಸಲ್ಲಿಸುತ್ತಿದೆ. ಕೆಎಸ್‌ಎಸ್ ಸಂಸ್ಥೆ ಅಡಿಯಲ್ಲಿ ನಡೆಯುತ್ತಿರುವ ಕಾಲೇಜುಗಳಲ್ಲಿ ಸುಮಾರು 3 ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳು ಪದವಿಯನ್ನು ಪಡೆದು ವಿವಿಧ ಇಲಾಖೆಗಳಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಹಾಗಾಗಿ ರವಿ ದಂಡಿನ ಅವರಿಗೆ ಟಿಕೆಟ್ ನೀಡಿದರೆ ಗೆಲುವು ಸುಲಭವಾಗಲಿದೆ ಎಂದರು.

ರವಿ ದಂಡಿನ ಬಿಜೆಪಿಯ ಸಕ್ರಿಯ ಕಾರ್ಯಕರ್ತರಾಗಿ, ಸಂಘಟಕರಾಗಿ, ಹೋರಾಟಗಾರರಾಗಿ, ಯುವಕರ ಕಣ್ಮಣಿಯಾಗಿ, ನಿರಂತರವಾಗಿ, ಸಮರ್ಥವಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಪದವೀಧರರ ಹಾಗೂ ಶಿಕ್ಷಕರ ಜ್ವಲಂತ ಸಮಸ್ಯೆಗಳ ಪರಿಹಾರಕ್ಕಾಗಿ ಹಗಲಿರುಳು ಶ್ರಮಿಸಿ ಯಶಸ್ವಿಯಾಗಿದ್ದಾರೆ. ಭಾರತೀಯ ಜನತಾ ಪಕ್ಷದಲ್ಲಿ ಕರ್ನಾಟಕ ರಾಜ್ಯ ಹಿಂದುಳಿದ ವರ್ಗದ ನಾಯಕರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಇಲ್ಲಿಯವರೆಗೂ ಹಳೇ ಧಾರವಾಡ ಜಿಲ್ಲೆಯ ಭಾಗದಲ್ಲಿ ಹಿಂದುಳಿದ ವರ್ಗದವರಿಗೆ ಪ್ರಾತಿನಿಧ್ಯ ನೀಡಿಲ್ಲ. ಹಣ ಬಲ, ರಾಜಕೀಯ ಬಲ ಇದ್ದವರಿಗೆ ಮಾತ್ರ ಈವರೆಗೆ ಟಿಕೇಟ್ ನೀಡಲಾಗಿದೆ. ಭಾರತೀಯ ಜನತಾ ಪಕ್ಷಕ್ಕೆ ಎಲ್ಲಾ ವರ್ಗದ ಜನರ ಅವಶ್ಯಕತೆ ಇರುವುದರಿಂದ ಹಿಂದುಳಿದ ವರ್ಗಕ್ಕೆ ಸೇರಿದ ರವಿ ದಂಡಿನ ಅವರಿಗೆ ಬಿಜೆಪಿ ಪಕ್ಷದಿಂದ ಈ ಬಾರಿ ಪಶ್ಚಿಮ ಪದವೀಧರ ಕ್ಷೇತ್ರದ ಟಿಕೆಟ್ ನೀಡಲು ಈ ಮೂಲಕ ಒಕ್ಕೊರಲಿನಿಂದ ಒತ್ತಾಯಿಸುತ್ತೇವೆ ಎಂದರು.

ನಿವೃತ್ತ ಪ್ರಾಚಾರ್ಯ ವಿ.ಎಸ್. ದಲಾಲಿ, ಬಿ.ಎಸ್. ಕಂಠಿ, ನಿವೃತ್ತ ಉಪ ಪ್ರಾಚಾರ್ಯ ಡಾ. ಜೆ.ಸಿ. ಜಂಪಣ್ಣನವರ, ಮಲ್ಲಿಕಾರ್ಜುನ ಕಿರೇಸೂರ ಮುಂತಾದವರು ಇದ್ದರು.




### ಅಂತೂರ-ಬೆಂತೂರದಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೆ ಸಚಿವ ಡಾ. ಎಚ್.ಕೆ. ಪಾಟೀಲ ಚಾಲನೆ

# ಪ್ರಾಮಾಣಿಕವಾಗಿ ಕೈಗೊಂಡ ಕೆಲಸಗಳು ಶಾಶ್ವತವಾಗಿರುತ್ತವೆ




> ಗ್ರಾಮೀಣ ಪ್ರದೇಶಗಳ ಸಮಗ್ರ ಅಭಿವೃದ್ಧಿಗೆ ಸರ್ಕಾರ ಹೆಚ್ಚಿನ ಆದ್ಯತೆ ನೀಡಿದ್ದು, ಮೂಲಸೌಕರ್ಯ ಸೌಲಭ್ಯಗಳನ್ನು ಹಂತ ಹಂತವಾಗಿ ಕಲ್ಪಿಸಲಾಗುತ್ತಿದೆ. ರಸ್ತೆ, ಕುಡಿಯುವ ನೀರು, ಒಳಚರಂಡಿ, ಸಾರ್ವಜನಿಕ ಕಟ್ಟಡಗಳು ಸೇರಿದಂತೆ ಜನೋಪಯೋಗಿ ಯೋಜನೆಗಳ ಮೂಲಕ ಗ್ರಾಮಗಳ ಜೀವನಮಟ್ಟವನ್ನು ಸುಧಾರಿಸುವುದು ಸರ್ಕಾರದ ಉದ್ದೇಶವಾಗಿದೆ ಎಂದು ಸಚಿವರು ಹೇಳಿದರು.

■ **ವಿಜಯಸಾಕ್ಷಿ ಸುದ್ದಿ, ಗದಗ**

ಎಲ್ಲ ಅಭಿವೃದ್ಧಿ ಕಾರ್ಯಗಳಿಗೂ ಹಣ ಮಾತ್ರವೇ ಸಾಕಾಗುವುದಿಲ್ಲ. ಅದರ ಜೊತೆಗೆ ಪ್ರಾಮಾಣಿಕತೆ ಅತ್ಯಂತ ಅಗತ್ಯವಾಗಿದೆ. ಪ್ರಾಮಾಣಿಕವಾಗಿ ಕೈಗೊಂಡ ಕೆಲಸಗಳೇ ಸಮಾಜಕ್ಕೆ ಶಾಶ್ವತ ಫಲ ನೀಡುತ್ತವೆ. ಈ ನಿಟ್ಟಿನಲ್ಲಿ ಇಲ್ಲಿನ ಅಭಿವೃದ್ಧಿ ಕಾರ್ಯಗಳು ನಿಜಕ್ಕೂ ಅಭಿನಂದನಾರ್ಹವಾಗಿವೆ ಎಂದು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.

ಅಂತೂರ-ಬೆಂತೂರ ಗ್ರಾಮದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶುಕ್ರವಾರ ಅಧಿಕೃತವಾಗಿ ಚಾಲನೆ ನೀಡಿ ಅವರು ಮಾತನಾಡಿದರು.

ಇಲ್ಲಿವರೆಗೂ ಗ್ರಾಮೀಣ ಪ್ರದೇಶಗಳಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ (ನರೇಗಾ)ಯನ್ನು ಸದ್ಬಳಕೆ ಮಾಡಲಾಗುತ್ತಿತ್ತು. ಆದರೆ ಇತ್ತೀಚೆಗೆ ಕೇಂದ್ರ ಸರ್ಕಾರ ಈ ಕಾನೂನನ್ನು ರದ್ದುಪಡಿಸಿರುವುದು ಗ್ರಾಮೀಣ ಅಭಿವೃದ್ಧಿಗೆ ಹಿನ್ನಡೆಯಾಗಿದೆ. ಈ ಕಾನೂನು ಪುನಃ ಜಾರಿಯಾಗಬೇಕೆಂದು ನಾನು ಕೇಂದ್ರ ಸರ್ಕಾರವನ್ನು ಒತ್ತಾಯಿಸುತ್ತೇನೆ ಎಂದು ಸಚಿವರು ತಿಳಿಸಿದರು.

ಡಿಜಿಟಲ್ ತಂತ್ರಜ್ಞಾನ ಬಳಕೆಯನ್ನು ಒತ್ತಿ ಹೇಳಿದ ಸಚಿವರು, ಪಕ್ಕದ ಒಂದು ಗ್ರಾಮದಲ್ಲಿ 15 ವರ್ಷಗಳ ಹಿಂದೆಯೇ ಡಿಜಿಟಲ್ ಗ್ರಂಥಾಲಯ ಆರಂಭವಾಗಿದ್ದು, ಇಂದು ಅದು ಎಲ್ಲ ಗ್ರಾಮಗಳಿಗೂ ವಿಸ್ತರಿಸಿರುವುದು ಸಂತಸದ ಸಂಗತಿ. ರೈತರು ಸಹ ಡಿಜಿಟಲ್ ಗ್ರಂಥಾಲಯಗಳನ್ನು ಬಳಸಿಕೊಂಡು ಹೊಸ ತಂತ್ರಜ್ಞಾನ, ಮಾಹಿತಿ ಮತ್ತು ಜ್ಞಾನವನ್ನು ಪಡೆದುಕೊಳ್ಳಬೇಕು. ಇದರಿಂದ ರೈತ ಸಮುದಾಯದಲ್ಲಿ ತಂತ್ರಜ್ಞಾನ ಅರಿವು ಹೆಚ್ಚಾಗಿ ಕೃಷಿ ಕ್ಷೇತ್ರದಲ್ಲೂ ಹೊಸ ಬದಲಾವಣೆ ಸಾಧ್ಯವಾಗಲಿದೆ ಎಂದು ಹಾರೈಸಿದರು.

ಗ್ರಾಮದಲ್ಲಿ ಐಆರ್‌ಡಿಎಫ್ ಯೋಜನೆಯಡಿ ನಿರ್ಮಾಣವಾದ ಅಂಗನವಾಡಿ ಕೇಂದ್ರ, ಡಿಜಿಟಲ್ ಗ್ರಂಥಾಲಯ, ಬಸ್ ತಂಗುದಾಣ, ಎಸ್‌ಡಿಪಿ ಯೋಜನೆಯಡಿ ನಿರ್ಮಾಣವಾದ ಅಂಗನವಾಡಿ ಹಾಗೂ ಜಿಮ್‌ಗಳನ್ನು ಶುಕ್ರವಾರ ಲೋಕಾರ್ಪಣೆ ಮಾಡಲಾಗಿದೆ. ಇವುಗಳ ಸದ್ಬಳಕೆಯನ್ನು ಗ್ರಾಮದ ಸಾರ್ವಜನಿಕರು ಮಾಡಿಕೊಳ್ಳಬೇಕೆಂದು ಸಚಿವರು ತಿಳಿಸಿದರು.

▸▸ 3ನೇ ಪುಟಕ್ಕೆ

## ರಾಷ್ಟ್ರಮಟ್ಟದ ಖೋಖೋ ಪಂದ್ಯಾವಳಿಗೆ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಕಣವಿ ಗ್ರಾಮದ ಸರಕಾರಿ ಪ್ರೌಢಶಾಲೆಯ ವಿದ್ಯಾರ್ಥಿನಿ ಪ್ರಿಯಾಂಕಾ ಹನಮಂತಪ್ಪ ಸುಳ್ಳದ ರಾಷ್ಟ್ರಮಟ್ಟದ ಖೋಖೋ ಪಂದ್ಯಾವಳಿಗೆ ಆಯ್ಕೆಯಾಗಿದ್ದಾರೆಂದು ರಾಷ್ಟ್ರಮಟ್ಟದ ತೀರ್ಪುಗಾರ ಜಿತೇಂದ್ರ ಸುಣಗಾರ ತಿಳಿಸಿದ್ದಾರೆ.



ಗುಜರಾತನಲ್ಲಿ ಅಮೆಚೂರ್ ಸಂಸ್ಥೆಯ ಆಶ್ರಯದಲ್ಲಿ ನಡೆಯುತ್ತಿರುವ 14 ವರ್ಷದೊಳಗಿನ ರಾಷ್ಟ್ರಮಟ್ಟದ ಖೋಖೋ ಚಾಂಪಿಯನ್‌ಶಿಪ್ ಪಂದ್ಯಾವಳಿಯಲ್ಲಿ ಪ್ರಿಯಾಂಕಾ ಹನಮಂತಪ್ಪ ಸುಳ್ಳದ ಭಾಗವಹಿಸಿ ತನ್ನ ಪ್ರತಿಭೆಯನ್ನು ಅನಾವರಣಗೊಳಿಸಿದ್ದಾರೆ. ಕಣವಿ ಗ್ರಾಮದ ಸರಕಾರಿ ಪ್ರೌಢಶಾಲೆಯ ವಿದ್ಯಾರ್ಥಿನಿ ಪ್ರಿಯಾಂಕ ಹನಮಂತಪ್ಪ ಸುಳ್ಳದ ರಾಷ್ಟ್ರಮಟ್ಟದ ಖೋಖೋ ಪಂದ್ಯಾವಳಿಗೆ ಆಯ್ಕೆಯಾಗಿದ್ದಾಕ್ಕಾಗಿ ಕಣವಿ ಹೊಸೂರ ಗ್ರಾಮಗಳ ಪ್ರಾಥಮಿಕ ಶಾಲೆ ಹಾಗೂ ಪ್ರೌಢಶಾಲೆಗಳ ಮುಖ್ಯೋಪಾಧ್ಯಾಯರು ಹಾಗೂ ಸಿಬ್ಬಂದಿ ವರ್ಗ, ಕಣವಿ ಹೊಸೂರು ಗ್ರಾಮಗಳ ಗುರು-ಹಿರಿಯರು ಸಂಘ, ಸಂಸ್ಥೆಗಳು ಹಾಗೂ ಕ್ರೀಡಾಭಿಮಾನಿಗಳು ಅಭಿನಂದಿಸಿದ್ದಾರೆ.

ಕರ್ನಾಟಕ ರಾಜ್ಯ ಖೋಖೋ ಅಮೆಚೂರ ಸಂಸ್ಥೆ ಬೆಂಗಳೂರು, ರಾಜ್ಯ ಕಾರ್ಯದರ್ಶಿಗಳಾದ ಚಿನ್ನಮೂರ್ತಿ, ಸಹ ಕಾರ್ಯದರ್ಶಿ ಜಾಡರ, ಗದಗ ಜಿಲ್ಲಾ ಅಮೆಚೂರ ಖೋಖೋ ಸಂಸ್ಥೆಯ ಅಧ್ಯಕ್ಷರಾದ ಅಂದಪ್ಪ ಉಳ್ಳಾಗಡ್ಡಿ ಹಾಗೂ ಕಾರ್ಯದರ್ಶಿ ಮುತ್ತಪ್ಪ ಮಾಳಶೆಟ್ಟಿ, ತರಬೇತಿ ನೀಡಿದ ವಾಯ್.ಬಿ. ಗೋವಣ್ಣವರ ಗುರುಗಳನ್ನು ಅಭಿನಂದಿಸಿದ್ದಾರೆ.

## ಬಿಜೆಪಿ ಅತಿ ಕಡಿಮೆ ಅಂತರದಿಂದ ಗೆದ್ದ ಸ್ಥಾನದಲ್ಲಿ ಮುಸ್ಲಿಂ ಮತಗಳನ್ನು ಅಳಿಸುವಂತೆ ಒತ್ತಡ: ಆತ್ಮಹತ್ಯೆ ಬೆದರಿಕೆ ಹಾಕಿದ ಬಿಎಲ್‌ಒ

■ವಿಜಯಸಾಕ್ಷಿ ಸುದ್ದಿ, ರಾಜಸ್ಥಾನ

ಜೈಪುರದ ಹವಾ ಮಹಲ್ ವಿಧಾನಸಭಾ ಕ್ಷೇತ್ರದ ಬೂತ್ ಮಟ್ಟದ ಅಧಿಕಾರಿಯೊಬ್ಬರು ( ಬಿಎಲ್‌ಒ ) ನೂರಾರು ಮತದಾರರನ್ನು, ಅವರಲ್ಲಿ ಹೆಚ್ಚಿನವರು ಮುಸ್ಲಿಮರನ್ನು ಮತದಾರರ ಪಟ್ಟಿಯಿಂದ ಅಳಿಸಲು ಒತ್ತಡ ಹೇರಲಾಗುತ್ತಿದೆ ಎಂದು ಆರೋಪಿಸಿದ್ದಾರೆ. ಈ ಒತ್ತಡವು ಅವರನ್ನು ಆತ್ಮಹತ್ಯೆಯ ಅಂಚಿಗೆ ತಳ್ಳಿದೆ ಎಂದು ಎಚ್ಚರಿಸಿದ್ದಾರೆ.

ಸರ್ಕಾರಿ ಶಾಲಾ ಬಿಎಲ್‌ಒ ಆಗಿ ಸೇವೆ ಸಲ್ಲಿಸುತ್ತಿರುವ ಕೀರ್ತಿ ಕುಮಾರ್, ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ನಂತರ ಪ್ರಕಟವಾದ ಕರಡು ಪಟ್ಟಿಯಿಂದ ತಮ್ಮ ಮತಗಟ್ಟೆಯ ಸುಮಾರು ಶೇ. 40 ರಷ್ಟು ಮತದಾರರ ಹೆಸರನ್ನು ತೆಗೆದುಹಾಕುವಂತೆ ಒತ್ತಾಯಿಸಲಾಗುತ್ತಿದೆ ಎಂದು ಹೇಳಿದರು. ಈ ಆಕ್ಷೇಪಣೆಗಳು ನಿರ್ದಿಷ್ಟವಾಗಿ ಮುಸ್ಲಿಂ ಮತದಾರರನ್ನು ಗುರಿಯಾಗಿಸಿಕೊಂಡಿವೆ ಎಂದು ಅವರು ಆರೋಪಿಸಿದರು, ಆದರೂ ಅವರು ಈಗಾಗಲೇ ಎಲ್ಲವನ್ನೂ ಪರಿಶೀಲಿಸಿರುವುದಾಗಿ ಹೇಳಿದ್ದಾರೆ.

### ಚಹಾ ಅಂಗಡಿ /ಹೊಟೇಲ್ ಇಲ್ಲದ ಅಪರೂಪದ ಗ್ರಾಮ

# ಹಳ್ಳಿಗೆ ಚಹಾ ಅಂಗಡಿ ಅನಿವಾರ್ಯವೇ?

ಇಂದಿನ ನಮ್ಮ ಬದುಕನ್ನು ಒಮ್ಮೆ ಶಾಂತವಾಗಿ ಗಮನಿಸಿದರೆ, ಚಹಾ ಇಲ್ಲದೆ ಒಂದು ದಿನವೂ ಪೂರ್ಣವಾಗುವುದಿಲ್ಲ ಎನ್ನುವ ಸ್ಥಿತಿಗೆ ನಾವು ತಲುಪಿದ್ದೇವೆ. ಬೆಳಿಗ್ಗೆ ಕಣ್ಣು ತೆರೆದ ಕೂಡಲೇ ಮೊದಲು ಚಹಾ ಬೇಕು ಎನ್ನುವ ಮಾತು ಮನೆಮನೆಗಳಲ್ಲಿ ಕೇಳಿಬರುತ್ತದೆ. ಕೆಲಸಕ್ಕೆ ಹೊರಡುವ ಮೊದಲು ಒಂದು ಕಪ್ ಚಹಾ, ಮಧ್ಯಾಹ್ನ ಕೆಲಸದ ಒತ್ತಡದಲ್ಲಿ ಮತ್ತೊಂದು ಚಹಾ, ಸಂಜೆ ದಣಿವು ತೀರಿಸಿಕೊಳ್ಳಲು ಮತ್ತೆ ಚಹಾ, ಸ್ನೇಹಿತರು ಬಂದಾಗ ಚಹಾ, ಅತಿಥಿಗಳು ಬಂದಾಗ ಚಹಾ... ಹೀಗೆ ದಿನವಿಡೀ ಚಹಾ ನಮ್ಮ ಬದುಕಿನ ಜೊತೆಗೆ ನಡೆದುಕೊಳ್ಳುತ್ತದೆ. ಬಸ್ ನಿಲ್ದಾಣ, ಆಸ್ಪತ್ರೆ, ಕಚೇರಿ, ಶಾಲೆಯ ಬಳಿ, ಹಳ್ಳಿಯ ಬೀದಿ ಮೂಲೆಗೂ ಒಂದು ಚಹಾ ಅಂಗಡಿ ಇರಲೇಬೇಕು ಎಂಬ ಭಾವನೆ ನಮಗೆ ಸಹಜವಾಗಿದೆ. ಚಹಾ ಇಲ್ಲದ ಜಾಗವೊಂದನ್ನು ಊಹಿಸುವುದೇ ಕಷ್ಟವಾಗಿರುವ ಈ ಕಾಲದಲ್ಲಿ, ಒಂದು ಗ್ರಾಮದಲ್ಲಿ ಹೋಟೆಲ್‌ಗಳೇ ಇಲ್ಲ, ಸಾರ್ವಜನಿಕವಾಗಿ ಚಹಾ ಮಾರಾಟವೂ ಇಲ್ಲ ಎಂದರೆ ಅದು ನಂಬಲಾರದ ಕಥೆಯಂತೆ ತೋರುತ್ತದೆ. ಆದರೆ ಇಂತಹ ಅಸಾಧ್ಯವೆನಿಸುವ ವಾಸ್ತವವೇ ಸವದತ್ತಿ ತಾಲೂಕಿನ ಹಿರೇ ಉಳ್ಳಿಗೇರಿ ಗ್ರಾಮದಲ್ಲಿ ನೋಡಬಹುದು.

ಸವದತ್ತಿ ಪಟ್ಟಣದಿಂದ ಕೇವಲ ಹತ್ತು ಕಿಲೋಮೀಟರ್ ದೂರದಲ್ಲಿರುವ ಹಿರೇ ಉಳ್ಳಿಗೇರಿ, ಧಾರವಾಡ ಸವದತ್ತಿ ಮುಖ್ಯ ರಸ್ತೆಗೆ ಹತ್ತಿಕೊಂಡೇ ಇರುವ ಗ್ರಾಮ. ರಸ್ತೆ ಸಂಪರ್ಕ ಉತ್ತಮವಾಗಿದೆ, ವಾಹನ ಸಂಚಾರ ನಿರಂತರವಾಗಿದೆ. ಸುತ್ತಮುತ್ತಲ ಹಳ್ಳಿಗಳು, ಪಟ್ಟಣಗಳ ಸಂಪರ್ಕವೂ ಇದೆ. ಇಷ್ಟೆಲ್ಲಾ ಅನುಕೂಲಗಳಿದ್ದರೂ, ಈ ಗ್ರಾಮದಲ್ಲಿ ಮಾತ್ರ ಒಂದೂ



ಹೋಟೆಲ್ ಇಲ್ಲ. ಅದರೊಂದಿಗೆ, ಹೋಟೆಲ್ ಇಲ್ಲದ ಕಾರಣ ಮಾತ್ರವಲ್ಲ, ಸಾಮಾಜಿಕ ನಿರ್ಧಾರವಾಗಿ ಗ್ರಾಮದ ವ್ಯಾಪ್ತಿಯಲ್ಲಿ ಎಲ್ಲಿಯೂ ಚಹಾ ಮಾರಾಟ ನಡೆಯುವುದಿಲ್ಲ.

ಇಲ್ಲಿ ಒಂದು ವಿಷಯವನ್ನು ಸ್ಪಷ್ಟವಾಗಿ ತಿಳಿದುಕೊಳ್ಳಬೇಕು. ಹಿರೇ ಉಳ್ಳಿಗೇರಿ ಜನರು ಮನೆಗಳಲ್ಲಿ ಚಹಾ ಕುಡಿಯುತ್ತಾರೆ. ಅದು ನಿಷೇಧಿತವಲ್ಲ, ಅಪರಾಧವೂ ಅಲ್ಲ. ಆದರೆ ಗ್ರಾಮ ಮಟ್ಟದಲ್ಲಿ ಅಂದರೆ ಸಾರ್ವಜನಿಕವಾಗಿ ಚಹಾ ಅಂಗಡಿ ಅಥವಾ ಹೋಟೆಲ್ ತೆರೆಯುವುದು ಇಲ್ಲಿನ ಸಂಪ್ರದಾಯಕ್ಕೆ ವಿರುದ್ಧವಾಗಿದೆ. ಈ ಅಂತರವೇ ಹಿರೇ ಉಳ್ಳಿಗೇರಿಯನ್ನು ವಿಭಿನ್ನವಾಗಿಸುತ್ತದೆ.

ಗ್ರಾಮದಲ್ಲಿ ಸುಮಾರು 350ರಿಂದ 400 ಮನೆಗಳು ಇವೆ. ಜನಸಂಖ್ಯೆ ಸುಮಾರು 3 ಸಾವಿರಕ್ಕೂ ಹೆಚ್ಚು. ಇಷ್ಟು ದೊಡ್ಡ ಗ್ರಾಮದಲ್ಲಿ ಸಾಮಾನ್ಯವಾಗಿ ಎರಡು ಮೂರು ಹೋಟೆಲ್‌ಗಳು, ಚಹಾ ಅಂಗಡಿಗಳು, ಉಪಹಾರ ಕೇಂದ್ರಗಳು ಇರುವುದು ಸಹಜ. ಆದರೆ ಹಿರೇ ಉಳ್ಳಿಗೇರಿಯಲ್ಲಿ ಕಿರಾಣಿ ಅಂಗಡಿಗಳಿವೆ, ಡಬ್ಬಿ ಅಂಗಡಿಗಳಿವೆ, ದಿನಸಿ ವಸ್ತುಗಳ ವ್ಯಾಪಾರ ನಡೆಯುತ್ತದೆ, ಆದರೆ ಚಹಾ ಮಾರುವುದಿಲ್ಲ.

ಗ್ರಾಮದ ಹಿರಿಯರನ್ನು ಕೇಳಿದರೆ, ಈ ಸಂಪ್ರದಾಯದ ಬೇರುಗಳು ತುಂಬಾ ಆಳದಲ್ಲಿವೆ ಎಂಬುದು ತಿಳಿಯುತ್ತದೆ. ನಮಗೆ ಬುದ್ಧಿ ಬಂದಾಗಿನಿಂದಲೂ ಈ ಗ್ರಾಮದಲ್ಲಿ ಹೋಟೆಲ್‌ಗಳೇ ಇಲ್ಲ. ನಮ್ಮ ಅಜ್ಜಂದಿರ ಕಾಲದಲ್ಲೂ ಹೀಗೆಯೇ ಇತ್ತು. ಆಗಲೂ ಯಾರೂ ಇಲ್ಲಿ ಚಹಾ ಮಾರಾಟ ಮಾಡಿರಲಿಲ್ಲ ಎಂದು ಅವರು ಹೇಳುತ್ತಾರೆ. ಇದು ಯಾವುದೇ ಲಿಖಿತ ನಿಯಮವಲ್ಲ, ಪಂಚಾಯತ್ ನಿರ್ಣಯವೂ ಅಲ್ಲ. ಇದು ಪೀಳಿಗೆಯಿಂದ ಪೀಳಿಗೆ ಸಾಗಿಬಂದ ಒಂದು ಸಾಂಪ್ರದಾಯವೇ ಎನ್ನಬಹುದು.

ಒಮ್ಮೆ ಯಾರಾದರೂ ಹೊಸದಾಗಿ ಹೋಟೆಲ್ ತೆರೆಯಬೇಕು ಎಂದು ಯೋಚಿಸಿದರೂ, ಅದು ಯಶಸ್ವಿಯಾಗುವುದಿಲ್ಲ ಎಂಬ ನಂಬಿಕೆ ಇಲ್ಲಿದೆ. ಕಾರಣ, ಗ್ರಾಮಸ್ಥರು ಅಲ್ಲಿ ಹೋಗಿ ಚಹಾ ಕುಡಿಯುವುದೇ ಇಲ್ಲ. ವ್ಯಾಪಾರ ನಡೆಯದ ಜಾಗದಲ್ಲಿ ಹೋಟೆಲ್ ಉಳಿಯುವುದು ಸಾಧ್ಯವಿಲ್ಲ. ಹೀಗಾಗಿ ಈ ಗ್ರಾಮದಲ್ಲಿ ಹೋಟೆಲ್‌ಗಳ ಸ್ಥಾಪನೆಯ ಪ್ರಯತ್ನಗಳೇ ನಡೆದಿಲ್ಲ ಎಂಬ ಮಾತು ಕೇಳಿಬರುತ್ತದೆ.

ಇಂದಿನ ಯುವಜನತೆ ಈ ಸಂಪ್ರದಾಯವನ್ನು ಹೇಗೆ ನೋಡುತ್ತದೆ ಎಂಬುದು ಕೂಡ ಗಮನಾರ್ಹ. ಮೊಬೈಲ್, ಇಂಟರ್ನೆಟ್, ಸಾಮಾಜಿಕ ಜಾಲತಾಣಗಳ ಮೂಲಕ ಜಗತ್ತಿನ ಎಲ್ಲ ಪದ್ಧತಿಗಳ ಪರಿಚಯ ಇದ್ದರೂ, ಹಿರೇ ಉಳ್ಳಿಗೇರಿಯ ಯುವಕರು ಕೂಡ ಈ ಗ್ರಾಮಪದ್ಧತಿಯನ್ನು ಸಹಜವಾಗಿ ಒಪ್ಪಿಕೊಂಡಿದ್ದಾರೆ. ಹೊರಗಿನ ಊರುಗಳಿಗೆ ಹೋದಾಗ ಚಹಾ ಕುಡಿಯಬಹುದು, ಆದರೆ ತಮ್ಮ ಗ್ರಾಮದಲ್ಲಿ ಸಾರ್ವಜನಿಕವಾಗಿ ಚಹಾ ವ್ಯಾಪಾರ ನಡೆಯಬಾರದು ಎಂಬ ಅಲಿಖಿತ ನಿಯಮವನ್ನು ಅವರು ಪಾಲಿಸುತ್ತಾರೆ.

ಇದರ ಪರಿಣಾಮವಾಗಿ ಗ್ರಾಮದಲ್ಲಿ ಜೀವನಶೈಲಿ ಸ್ವಲ್ಪ ವಿಭಿನ್ನವಾಗಿದೆ. ಬೆಳಿಗ್ಗೆ ಹೊಲಕ್ಕೆ ಹೋಗುವ ಮುನ್ನ ಹಾಲು, ಮಜ್ಜಿಗೆ ಅಥವಾ ನೀರು ಕುಡಿಯುವುದು ಸಾಮಾನ್ಯ. ಸಂಜೆ ವೇಳೆ ಮನೆಗಳಲ್ಲಿ ಚಹಾ ಮಾಡಿಕೊಳ್ಳುತ್ತಾರೆ, ಆದರೆ ಚಹಾ ಕುಡಿಯಲು ಹೊರಗೆ ಹೋಗುವುದು ಎಂಬ ಕಲ್ಪನೆ ಇಲ್ಲ. ಅತಿಥಿಗಳು ಬಂದರೂ, ಮನೆಯೊಳಗೇ ಆತಿಥ್ಯ ನೀಡಲಾಗುತ್ತದೆ. ಹೀಗಾಗಿ ಹೋಟೆಲ್‌ಗಳ ಅವಶ್ಯಕತೆಯೇ ಉಂಟಾಗಿಲ್ಲ.

ಅಬ್ಬಾ, ಇಂತಹ ಗ್ರಾಮವೂ ಇದೆಯೇ ಎಂಬ ಪ್ರಶ್ನೆ ಸಹಜವಾಗಿ ಮೂಡುತ್ತದೆ. ಆದರೆ ಹಿರೇ ಉಳ್ಳಿಗೇರಿ ನಮಗೆ ಒಂದು ಮಹತ್ವದ ಪಾಠ ಕಲಿಸುತ್ತದೆ. ನಾವು ಅನಿವಾರ್ಯ ಎಂದು ಭಾವಿಸುವ ಅನೇಕ ಅಭ್ಯಾಸಗಳು ವಾಸ್ತವದಲ್ಲಿ ಆಯ್ಕೆಯ ವಿಷಯವಾಗಿವೆ. ಚಹಾ ಇಲ್ಲದೆ ಸಾರ್ವಜನಿಕ ಬದುಕು ಸಾಗಲಾರದು ಎಂಬ ನಮ್ಮ ಕಲ್ಪನೆಯನ್ನು ಈ ಗ್ರಾಮ ಮೌನವಾಗಿ ಪ್ರಶ್ನಿಸುತ್ತದೆ.

ಇಂದು ಜಗತ್ತು ಒಂದೇ ರೀತಿಯ ಸಂಸ್ಕೃತಿಯತ್ತ ಸಾಗುತ್ತಿರುವಾಗ, ಹಿರೇ ಉಳ್ಳಿಗೇರಿಯಂತಹ ಗ್ರಾಮಗಳು ನಮ್ಮ ವೈವಿಧ್ಯತೆಯನ್ನು ನೆನಪಿಸುತ್ತವೆ. ಇದು ಹಿಂದುಳಿದತನದ ಸಂಕೇತವಲ್ಲ; ಬದಲಾಗಿ ತಮ್ಮದೇ ಆದ ಮೌಲ್ಯಗಳನ್ನು ಕಾಪಾಡಿಕೊಂಡು ಬದುಕುವ ಆತ್ಮವಿಶ್ವಾಸದ ಉದಾಹರಣೆ. ಹಿರೇ ಉಳ್ಳಿಗೇರಿ ಕೇವಲ ಚಹಾ ಇಲ್ಲದ ಗ್ರಾಮ ಅಲ್ಲ. ಅದು ಹೋಟೆಲ್ ಸಂಸ್ಕೃತಿಗೆ ಹೊರತಾಗಿ ಬದುಕುವ ಒಂದು ಸಮಾಜ, ಮತ್ತು ನಮ್ಮ ದಿನನಿತ್ಯದ ಅಭ್ಯಾಸಗಳ ಬಗ್ಗೆ ಮರುಚಿಂತನೆ ಮಾಡಲು ಪ್ರೇರೇಪಿಸುವ ಒಂದು ಅಪರೂಪದ ಗ್ರಾಮೀಣ ಕಥೆ.




– ಮನೋಜ ಮಸನಿ
ಪ್ರಶಿಕ್ಷಣಾರ್ಥಿ,
ವಾರ್ತಾ ಇಲಾಖೆ ಧಾರವಾಡ.

## ಬಾಲಸೋರ್‌ನಲ್ಲಿ ಗೋರಕ್ಷಕರಿಂದ 35 ವರ್ಷದ ಮುಸ್ಲಿಂ ವ್ಯಕ್ತಿಯೊಬ್ಬನ ಹತ್ಯೆ, ಐವರು ಬಂಧನ

■ವಿಜಯಸಾಕ್ಷಿ ಸುದ್ದಿ, ಒಡಿಶಾ

ಒಡಿಶಾದ ಬಾಲಸೋರ್ ಜಿಲ್ಲೆಯಲ್ಲಿ ಬುಧವಾರ 35 ವರ್ಷದ ಮುಸ್ಲಿಂ ವ್ಯಕ್ತಿಯೊಬ್ಬ ಪ್ರಯಾಣಿಸುತ್ತಿದ್ದ ವ್ಯಾನ್‌ನಲ್ಲಿ ದನಗಳನ್ನು ಸಾಗಿಸುವುದನ್ನು ವಿರೋಧಿಸಿದ ಜನರ ಗುಂಪೊಂದು ಆತನ ಮೇಲೆ ಹಲ್ಲೆ ನಡೆಸಿದ ಆರೋಪದ ಮೇಲೆ ಆತನನ್ನು ಹೊಡೆದು ಸಾಯಿಸಲಾಗಿದೆ ಎಂದು ಪೊಲೀಸರು ತಿಳಿಸಿರುವುದಾಗಿ ಮಕ್ತೂಬ್ ಮೀಡಿಯಾ ವರದಿ ಮಾಡಿದೆ.



ಬೆಳಿಗ್ಗೆ 5 ಗಂಟೆಯ ಸುಮಾರಿಗೆ ಹಲ್ಲೆ ನಡೆದಿದ್ದು, ದಾಳಿಕೋರರು ರಸ್ತೆಯಲ್ಲಿ ವಾಹನವನ್ನು ನಿಲ್ಲಿಸಿ ಚಾಲಕ ಮತ್ತು ಸಂತ್ರಸ್ತ ಇಬ್ಬರನ್ನೂ ಕ್ರೂರವಾಗಿ ಥಳಿಸಿದ್ದಾರೆ ಎಂದು ಆರೋಪಿಸಲಾಗಿದೆ, ಅವರನ್ನು ಖಿಇ ಮಕಂದರ್ ಮಹಮ್ಮದ್ ಎಂದು ಗುರುತಿಸಲಾಗಿದೆ.

ಘಟನೆಯಲ್ಲಿ ಇಬ್ಬರೂ ಗಾಯಗೊಂಡಿದ್ದರೂ, ಬಾಲಸೋರ್ ಜಿಲ್ಲಾ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾಗ ಮಹಮ್ಮದ್ ಸಾವನ್ನಪ್ಪಿದರು.

ಘಟನೆಯ ವೀಡಿಯೊವೊಂದು ಬಹಿರಂಗವಾಗಿದ್ದು, ಅದರಲ್ಲಿ ದುಷ್ಕರ್ಮಿಗಳು ಸಂತ್ರಸ್ತರಿಗೆ "ಜೈ ಶ್ರೀ ರಾಮ್" ಎಂದು ಹೇಳುವಂತೆ ಒತ್ತಾಯಿಸುತ್ತಿರುವುದನ್ನು ತೋರಿಸುತ್ತದೆ.

ಬಾಪು, ಪವನ್, ಪಿಂಟು, ನೇಪಾಳಿ ಮತ್ತು ಚಿನು ತೆಲೆಂಗಾ ಎಂದು ಗುರುತಿಸಲಾದ ದಾಳಿಕೋರರು ಶೇಖ್ ಮೇಲೆ ಹರಿತವಾದ ಆಯುಧಗಳು, ಪೈಪ್‌ಗಳು ಮತ್ತು ಚಾಕುಗಳಿಂದ ಹಲ್ಲೆ ನಡೆಸಿ, ತೀವ್ರ ಗಾಯಗೊಳಿಸಿದ್ದಾರೆ.

ಆರಂಭದಲ್ಲಿ, ಬಾಲಸೋರ್ ಸದರ್ ಪೊಲೀಸ್ ಠಾಣೆಯ ಸಬ್ ಇನ್ಸ್‌ಪೆಕ್ಟರ್ ನೀಡಿದ ದೂರಿನ ಆಧಾರದ ಮೇಲೆ ಪೊಲೀಸರು ಪ್ರಕರಣ ದಾಖಲಿಸಿಕೊಂಡರು, ಆದರೆ ಎಫ್‌ಐಆರ್‌ನಲ್ಲಿ ಹಲ್ಲೆಯ ಬಗ್ಗೆ ಉಲ್ಲೇಖಿಸಲಿಲ್ಲ. ಬದಲಾಗಿ, ಅದು ವ್ಯಾನ್‌ನ ಚಾಲಕ ಮತ್ತು ಮಾಲೀಕರನ್ನು ಮಾತ್ರ ಹೆಸರಿಸಿ ಪ್ರಾಣಿಗಳ ಮೇಲಿನ ಕ್ರೌರ್ಯ ತಡೆ ಕಾಯ್ದೆ, ಒರಿಸ್ಸಾ ಗೋಹತ್ಯೆ ತಡೆ ಕಾಯ್ದೆ ಮತ್ತು ಭಾರತೀಯ ನ್ಯಾಯ ಸಂಹಿತಾ ನಿಬಂಧನೆಗಳ ಅಡಿಯಲ್ಲಿ ಪ್ರಕರಣ ದಾಖಲಿಸಿತು.

ಈ ಮೊದಲ ಎಫ್‌ಐಆರ್ ಪ್ರಕಾರ, ದನಗಳನ್ನು ತುಂಬಿದ್ದ ಪಿಕಪ್ ವ್ಯಾನ್ ಅನ್ನು ಜಯದೇವ ಕಸ್ಬಾ ಕಡೆಯಿಂದ ವೇಗವಾಗಿ ಚಲಾಯಿಸಿಕೊಂಡು ಬಂದು, ಸಮತೋಲನ ತಪ್ಪಿ ರಸ್ತೆಬದಿಯಲ್ಲಿ ಉರುಳಿಸಲಾಯಿತು.

ಪೊಲೀಸರು ಸ್ಥಳಕ್ಕೆ ತಲುಪುವ ಹೊತ್ತಿಗೆ, ಚಾಲಕನನ್ನು ಆಸ್ಪತ್ರೆಗೆ ಸ್ಥಳಾಂತರಿಸಲಾಗಿತ್ತು ಮತ್ತು ಸ್ಥಳದಲ್ಲಿ ಒಂದು ಹಸು ಪತ್ತೆಯಾಗಿತ್ತು ಎಂದು ಅದು ಹೇಳಿಕೊಂಡಿದೆ.


"ಹಸುವನ್ನು ವಶಪಡಿಸಿಕೊಂಡು ಮಾ ಭಾರತಿ ಗೋಶಾಲೆಗೆ ತರಲಾಯಿತು, ಮತ್ತು ಪಿಕಪ್ ವಾಹನವನ್ನು ಪೊಲೀಸ್ ಠಾಣೆಗೆ ತರಲಾಯಿತು. ಪಿಕಪ್ ವ್ಯಾನ್ ಮಾಲೀಕರು ಮತ್ತು ಚಾಲಕನ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲು ದೂರುದಾರರು ಲಿಖಿತ ವರದಿಯನ್ನು ಸಲ್ಲಿಸಿದ್ದಾರೆ" ಎಂದು ಎಫ್‌ಐಆರ್‌ನಲ್ಲಿ ಹೇಳಲಾಗಿದೆ.

ಸಂಜೆ ನಂತರ, ಬಲಿಪಶುವಿನ ಸಹೋದರ ಎಸ್‌ಕೆ ಜಿತೇಂದರ್ ಮಹಮ್ಮದ್ ನೀಡಿದ ದೂರಿನ ಆಧಾರದ ಮೇಲೆ ಎರಡನೇ ಎಫ್‌ಐಆರ್ ದಾಖಲಿಸಲಾಯಿತು. ಐದು ಜನರು ವ್ಯಾನ್ ಅನ್ನು ಅಡ್ಡಗಟ್ಟಿ ತನ್ನ ಸಹೋದರನ ಮೇಲೆ ಮಾರಕ ಆಯುಧಗಳಿಂದ ಹಲ್ಲೆ ನಡೆಸಿದ್ದಾರೆ ಎಂದು ಅವರು ತಮ್ಮ ದೂರಿನಲ್ಲಿ ಆರೋಪಿಸಿದ್ದಾರೆ.

ಪೊಲೀಸ್ ಗಸ್ತು ವಾಹನ ಸ್ಥಳಕ್ಕೆ ತಲುಪಿ ತನ್ನ ಸಹೋದರನನ್ನು ಬಾಲಸೋರ್ ಜಿಲ್ಲಾ ಕೇಂದ್ರ ಆಸ್ಪತ್ರೆಗೆ ಸ್ಥಳಾಂತರಿಸಿದರೂ, ಚಿಕಿತ್ಸೆಯ ಸಮಯದಲ್ಲಿ ಅವರು ಸಾವನ್ನಪ್ಪಿದ್ದಾರೆ ಎಂದು ಅವರು ಹೇಳಿದ್ದಾರೆ. ಈ ದೂರಿನ ಆಧಾರದ ಮೇಲೆ, ಐವರು ಆರೋಪಿಗಳ ವಿರುದ್ಧ ಭಾರತೀಯ ನ್ಯಾಯ ಸಂಹಿತಾ ಸೆಕ್ಷನ್ 103(2) ರ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ, ಇದು ಗುಂಪು ಮಾಡಿದ ಕೊಲೆಗೆ ಶಿಕ್ಷೆಯನ್ನು ನೀಡುತ್ತದೆ.

ದಾಳಿಯಲ್ಲಿ ಇನ್ನಷ್ಟು ಜನರು ಭಾಗಿಯಾಗಿದ್ದಾರೆಯೇ ಎಂದು ಖಚಿತಪಡಿಸಿಕೊಳ್ಳಲು ಆರೋಪಿಗಳನ್ನು ವಿಚಾರಣೆ ನಡೆಸಲಾಗುತ್ತಿದೆ.

## ಮಧ್ಯಪ್ರದೇಶ: ಆರುತಿಂಗಳ ಮಗುವಿಗೆ ಎದೆಹಾಲುಣಿಸುತ್ತಿದ್ದ ಪತ್ನಿಯನ್ನು ಹೊಡೆದುಕೊಂದ ಪತಿ, ಉಸಿರುಗಟ್ಟಿ ಮಗುವೂ ಸಾವು



■ವಿಜಯಸಾಕ್ಷಿ ಸುದ್ದಿ, ಖಾರ್ಗೋನ್

ಮಧ್ಯಪ್ರದೇಶದ ಖಾರ್ಗೋನ್ ಜಿಲ್ಲೆಯ ಬೇಡ್ಯಾ ಪೊಲೀಸ್ ಠಾಣೆ ಪ್ರದೇಶದ ಬಕಾವಾ ಗ್ರಾಮದಲ್ಲಿ ವ್ಯಕ್ತಿಯೊಬ್ಬ ತನ್ನ ಪತ್ನಿಯ ಮೇಲೆ ಅನುಮಾನ ವ್ಯಕ್ತಪಡಿಸಿ ಆಕೆಯನ್ನು ಹೊಡೆದು ಕೊಂದ ಆಘಾತಕಾರಿ ಘಟನೆ ನಡೆದಿದೆ. ಹಲ್ಲೆಯ ಸಮಯದಲ್ಲಿ ದಂಪತಿಯ ಆರು ತಿಂಗಳ ಮಗು ಕೂಡ ಹಾಲುಕುಡಿಯುತ್ತಿದ್ದಾಗ ಉಸಿರುಗಟ್ಟಿ ಸಾವನ್ನಪ್ಪಿದ್ದು, ದುರಂತ ಇನ್ನಷ್ಟು ಉಲ್ಬಣಗೊಂಡಿದೆ.

ಪೊಲೀಸರ ಪ್ರಕಾರ, ಗುರುವಾರ ಬೆಳಿಗ್ಗೆ 30 ವರ್ಷದ ಚಂಪಾಬಾಯಿ ಮಾಸ್ಕರ್ ಮತ್ತು ಅವರ ಆರುತಿಂಗಳ ಮಗುವಿನ ಶವಗಳು ಅವರ ಮನೆಯಲ್ಲಿ ಪತ್ತೆಯಾಗಿವೆ. ಮಾಹಿತಿ ಪಡೆದ ನಂತರ ಪೊಲೀಸರು ಮತ್ತು ವಿಧಿವಿಜ್ಞಾನ ತಂಡಗಳು ಸ್ಥಳಕ್ಕೆ ತಲುಪಿವೆ ಎಂದು ಪೊಲೀಸ್ ವರಿಷ್ಠಾಧಿಕಾರಿ ರವೀಂದ್ರ ವರ್ಮಾ ತಿಳಿಸಿದ್ದಾರೆ. ಮಹಿಳೆಯ ಪತಿ ಸುನಿಲ್ ಶವಗಳ ಬಳಿ ಕುಳಿತಿರುವುದು ಕಂಡುಬಂದಿದ್ದು, ಅನುಮಾನದ ಮೇಲೆ ಅವರನ್ನು ವಶಕ್ಕೆ ತೆಗೆದುಕೊಳ್ಳಲಾಗಿದೆ.

ಚಂಪಾಬಾಯಿಯ ದೇಹದ ಮೇಲೆ ಹಲವು ಗಾಯದ ಗುರುತುಗಳು ಕಂಡುಬಂದಿವೆ. ವಿಚಾರಣೆಯ ಸಮಯದಲ್ಲಿ, ಸುನಿಲ್ ತನ್ನ ಹೆಂಡತಿಯನ್ನು ಕೊಂದಿದ್ದಾಗಿ ಒಪ್ಪಿಕೊಂಡಿದ್ದಾನೆ ಎನ್ನಲಾಗಿದೆ.

## ಮಹಾರಾಷ್ಟ್ರ ಮಹಾನಗರ ಪಾಲಿಕೆ ಚುನಾವಣೆಯಲ್ಲಿ ಕರ್ನಾಟಕದ ಹಿರಿಯ ಪತ್ರಕರ್ತೆ ಗೌರಿ ಲಂಕೇಶ್ ಹತ್ಯೆ ಆರೋಪಿ ಗೆಲುವು

■ವಿಜಯಸಾಕ್ಷಿ ಸುದ್ದಿ, ಮುಂಬೈ

ಕರ್ನಾಟಕದ ಹಿರಿಯ ಪತ್ರಕರ್ತೆ ಗೌರಿ ಲಂಕೇಶ್ ಹತ್ಯೆಯ ಪ್ರಮುಖ ಆರೋಪಿ ಶ್ರೀಕಾಂತ್ ಪಂಗಾರ್ಕರ್, ಮಹಾರಾಷ್ಟ್ರದ ಜಲ್ನಾ ಮುನ್ಸಿಪಲ್ ಕಾರ್ಪೊರೇಷನ್ ಚುನಾವಣೆಯಲ್ಲಿ ಸ್ವತಂತ್ರ ಅಭ್ಯರ್ಥಿಯಾಗಿ ಗೆಲುವು ಸಾಧಿಸಿದ್ದಾರೆ.



ಪಂಗಾರ್ಕರ್ ವಾರ್ಡ್ 13 ರಿಂದ ಕಣದಲ್ಲಿದ್ದರು. ಅವರ ಎದುರಾಳಿಗಳು ಬಿಜೆಪಿ ಮತ್ತು ಇತರ ಹಲವಾರು ಪಕ್ಷಗಳ ಅಭ್ಯರ್ಥಿಗಳಾಗಿದ್ದರು, ಆದರೂ ಏಕನಾಥ್ ಶಿಂಧೆ ನೇತೃತ್ವದ ಶಿವಸೇನೆ ಯಾವುದೇ ಸ್ಪರ್ಧಿಯನ್ನು ಕಣಕ್ಕಿಳಿಸಿಲ್ಲ. ಪ್ರಾಸಂಗಿಕವಾಗಿ, ನವೆಂಬರ್ 2024 ರ ವಿಧಾನಸಭಾ ಚುನಾವಣೆಗೆ ಮುನ್ನ, ಪಂಗಾರ್ಕರ್ ಏಕನಾಥ್ ಶಿಂಧೆ ನೇತೃತ್ವದ ಶಿವಸೇನೆಯನ್ನು ಸೇರಿದರು. ಆದಾಗ್ಯೂ, ತೀವ್ರ ಆಕ್ರೋಶದ ನಂತರ, ಶಿಂಧೆ ಪಕ್ಷಕ್ಕೆ ತಮ್ಮ ಸೇರ್ಪಡೆಯನ್ನು ಸ್ಥಗಿತಗೊಳಿಸಿದರು.

ಪಿಟಿಐ ವರದಿ ಪ್ರಕಾರ, ಪಂಗಾರ್ಕರ್ 2001 ಮತ್ತು 2006 ರ ನಡುವೆ ಅವಿಭಜಿತ ಶಿವಸೇನೆಯಿಂದ ಜಲ್ನಾ ಮುನ್ಸಿಪಲ್ ಕೌನ್ಸಿಲ್ ಸದಸ್ಯರಾಗಿದ್ದರು. 2011 ರಲ್ಲಿ ಶಿವಸೇನೆ ಅವರಿಗೆ ಟಿಕೆಟ್ ನಿರಾಕರಿಸಿದ ನಂತರ ಅವರು ಹಿಂದುತ್ವ ಉಗ್ರಗಾಮಿ ಗುಂಪು ಹಿಂದೂ ಜನಜಾಗೃತಿ ಸಮಿತಿಯನ್ನು ಸೇರಿದರು. ಹಿರಿಯ ಪತ್ರಕರ್ತೆ ಗೌರಿ ಲಂಕೇಶ್ ಅವರನ್ನು ಸೆಪ್ಟೆಂಬರ್ 2017 ರಲ್ಲಿ ಬೆಂಗಳೂರಿನ ಅವರ ನಿವಾಸದ ಹೊರಗೆ ಗುಂಡಿಕ್ಕಿ ಕೊಲ್ಲಲಾಯಿತು. ನಂತರ ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಕರ್ನಾಟಕ ಪೊಲೀಸರು ಪಂಗಾರ್ಕರ್ ಅವರನ್ನು ಬಂಧಿಸಿದರು. ಈ ಪ್ರಕರಣದಲ್ಲಿ ಕರ್ನಾಟಕ ಹೈಕೋರ್ಟ್ ಅವರಿಗೆ 2024 ಸೆಪ್ಟೆಂಬರ್ 4 ರಂದು ಜಾಮೀನು ನೀಡಿತು. ರಾಜ್ಯದ ವಿವಿಧ ಭಾಗಗಳಿಂದ ಕಚ್ಚಾ ಬಾಂಬ್‌ಗಳು ಮತ್ತು ಶಸ್ತ್ರಾಸ್ತ್ರಗಳನ್ನು ವಶಪಡಿಸಿಕೊಂಡ ಪ್ರಕರಣಕ್ಕೆ ಸಂಬಂಧಿಸಿದಂತೆ ಆಗಸ್ಟ್ 2018 ರಲ್ಲಿ ಮಹಾರಾಷ್ಟ್ರ ಭಯೋತ್ಪಾದನಾ ನಿಗ್ರಹ ದಳ (ಎಟಿಎಸ್) ಅವರನ್ನು ಬಂಧಿಸಿತು. ಆ ಸಮಯದಲ್ಲಿ ಪಂಗಾರ್ಕರ್ ವಿರುದ್ಧ ಸ್ಫೋಟಕ ಕಾಯ್ದೆ, ಸ್ಫೋಟಕ ವಸ್ತುಗಳ ಕಾಯ್ದೆ ಮತ್ತು ಕಾನೂನುಬಾಹಿರ ಚಟುವಟಿಕೆಗಳು (ತಡೆಗಟ್ಟುವಿಕೆ) ಕಾಯ್ದೆ (ಯುಎಪಿಎ) ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿತ್ತು.

# ಇಡಿ ಕಚೇರಿ ಮೇಲೆ ರಾಜ್ಯ ಪೊಲೀಸರಿಂದ ಪೂರ್ವಯೋಜಿತ ದಾಳಿ: ಜಾರ್ಖಂಡ್ ಹೈಕೋರ್ಟ್

■ವಿಜಯಸಾಕ್ಷಿ ಸುದ್ದಿ, ಜಾರ್ಖಂಡ್

ಜನವರಿ 16 ರಂದು ಜಾರಿ ನಿರ್ದೇಶನಾಲಯ (ಇಡಿ) ಕಚೇರಿಯ ಮೇಲೆ ಇತ್ತೀಚೆಗೆ ನಡೆದ ಪೊಲೀಸ್ ದಾಳಿಯು ಪ್ರಾಥಮಿಕವಾಗಿ ಪೂರ್ವಯೋಜಿತ ಎಂದು ಕಾಣುತ್ತಿದೆ ಎಂದು ಜಾರ್ಖಂಡ್ ಹೈಕೋರ್ಟ್ ಶುಕ್ರವಾರ ಹೇಳಿದೆ.



ಇಡಿ ಸಲ್ಲಿಸಿದ ರಿಟ್ ಅರ್ಜಿಯನ್ನು ಆಲಿಸಿದ ನ್ಯಾಯಮೂರ್ತಿ ಸಂಜಯ್ ಕುಮಾರ್ ಡ್ವಿವೇದಿ, ಕೇಂದ್ರ ಗೃಹ ಕಾರ್ಯದರ್ಶಿಯನ್ನು ಪ್ರಕರಣದಲ್ಲಿ ಪಕ್ಷವನ್ನಾಗಿ ಮಾಡುವಂತೆ ಕೇಂದ್ರ ಸಂಸ್ಥೆಗೆ ನಿರ್ದೇಶಿಸಿದರು.

ಇಡಿ ಕಚೇರಿ ಮತ್ತು ಅದರ ಅಧಿಕಾರಿಗಳಿಗೆ ಭದ್ರತೆ ಒದಗಿಸಲು ಕೇಂದ್ರ ಮೀಸಲು ಪೊಲೀಸ್ ಪಡೆ (ಸಿಆರ್‌ಪಿಎಫ್)/ಗಡಿ ಭದ್ರತಾ ಪಡೆ (ಬಿಎಸ್‌ಎಫ್) ಅಥವಾ ಯಾವುದೇ ಇತರ ಅರೆಸೈನಿಕ ಪಡೆಗಳನ್ನು ನಿಯೋಜಿಸಲು ನ್ಯಾಯಾಲಯವು ಕೇಂದ್ರ ಗೃಹ ಕಾರ್ಯದರ್ಶಿಗೆ ಆದೇಶಿಸಿತು.

ಇಡಿ ಕಚೇರಿಯ ಸರಿಯಾದ ಭದ್ರತೆಯನ್ನು ಖಚಿತಪಡಿಸಿಕೊಳ್ಳಲು ನ್ಯಾಯಮೂರ್ತಿ ಡ್ವಿವೇದಿ ರಾಂಚಿಯ ಹಿರಿಯ ಪೊಲೀಸ್ ವರಿಷ್ಠಾಧಿಕಾರಿ (ಎಸ್‌ಎಸ್‌ಪಿ) ರಾಕೇಶ್ ರಂಜನ್ ಅವರಿಗೆ ನಿರ್ದೇಶನ ನೀಡಿದರು.

ಇಡಿ ಕಚೇರಿ ಮತ್ತು ಅದರ ಅಧಿಕಾರಿಗಳ ಭದ್ರತೆಯಲ್ಲಿ ಯಾವುದೇ ಲೋಪವಾಗಿದ್ದರೆ, ಅದಕ್ಕೆ ಎಸ್‌ಎಸ್‌ಪಿ ರಾಂಚಿ ಅವರನ್ನು ನೇರವಾಗಿ ಹೊಣೆಗಾರರನ್ನಾಗಿ ಮಾಡಲಾಗುತ್ತದೆ ಎಂದು ನ್ಯಾಯಾಲಯ ಗಮನಿಸಿದೆ.

ಜಾರ್ಖಂಡ್‌ನ ಮಾಜಿ ಸರ್ಕಾರಿ ಉದ್ಯೋಗಿ ಸಂತೋಷ್ ಕುಮಾರ್ ಅವರು ವಿಮಾನ ನಿಲ್ದಾಣ ಪೊಲೀಸ್ ಠಾಣೆಯಲ್ಲಿ ದಾಖಲಿಸಿದ ಪ್ರಥಮ ಮಾಹಿತಿ ವರದಿ (ಎಫ್‌ಐಆರ್) ಆಧಾರದ ಮೇಲೆ ಇಡಿ ಅಧಿಕಾರಿಗಳ ವಿರುದ್ಧದ ಪೊಲೀಸ್ ತನಿಖೆಗೆ ಹೈಕೋರ್ಟ್ ತಡೆ ನೀಡಿದೆ.

ಜನವರಿ 14 ರ ಗುರುವಾರ, ಇಡಿ ತನ್ನ ಆವರಣದಲ್ಲಿ ರಾಜ್ಯ ಪೊಲೀಸರು ನಡೆಸಿದ ದಾಳಿಯ ಬಗ್ಗೆ ಕೇಂದ್ರ ತನಿಖಾ ದಳ (ಸಿಬಿಐ) ತನಿಖೆ ನಡೆಸಬೇಕೆಂದು ಕೋರಿ ಜಾರ್ಖಂಡ್ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದು, ಕೇಂದ್ರ ಸಂಸ್ಥೆಯ ಕಾರ್ಯನಿರ್ವಹಣೆಯಲ್ಲಿ ಪೊಲೀಸರು 'ನೇರ ಹಸ್ತಕ್ಷೇಪ' ಮಾಡಿದ್ದಾರೆ ಎಂದು ಆರೋಪಿಸಿದೆ. ಸಂತೋಷ್ ನಡೆಸಿದ 23 ಕೋಟಿ ರೂಪಾಯಿಗಳ ಹಗರಣದ ಬಗ್ಗೆ ಕೇಂದ್ರ ಸಂಸ್ಥೆ ತನಿಖೆ ನಡೆಸುತ್ತಿದೆ ಎಂದು ಇಡಿ ವಕೀಲರು ನ್ಯಾಯಾಲಯಕ್ಕೆ ಮಾಹಿತಿ ನೀಡಿದರು. ಈ ವಿಷಯದಲ್ಲಿ ಇಡಿ ಈಗಾಗಲೇ 9 ಕೋಟಿ ರೂಪಾಯಿಗಳನ್ನು ವಸೂಲಿ ಮಾಡಿದೆ ಎಂದು ಅವರು ನ್ಯಾಯಾಲಯಕ್ಕೆ ತಿಳಿಸಿದರು.

## ಪ್ರಾಮಾಣಿಕವಾಗಿ ಕೈಗೊಂಡ ಕೆಲಸಗಳು ಶಾಶ್ವತವಾಗಿರುತ್ತವೆ

▶▶ ಮೊದಲನೇ ಪುಟದಿಂದ



ಅಂತೂರ-ಬೆಂತೂರ ಗ್ರಾಮದಲ್ಲಿ ಕೈಗೊಳ್ಳಲಾಗುತ್ತಿರುವ ಅಭಿವೃದ್ಧಿ ಕಾಮಗಾರಿಗಳು ಗ್ರಾಮಸ್ಥರ ಬಹುದಿನಗಳ ಬೇಡಿಕೆಯಾಗಿದ್ದು, ಅವುಗಳು ಪೂರ್ಣಗೊಂಡ ನಂತರ ಜನರಿಗೆ ಅಗತ್ಯ ಮೂಲ ಸೌಕರ್ಯಗಳು ಲಭ್ಯವಾಗಲಿವೆ ಎಂದು ಸಚಿವ ಎಚ್.ಕೆ. ಪಾಟೀಲ ವಿಶ್ವಾಸ ವ್ಯಕ್ತಪಡಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗ್ರಾ.ಪಂ ಅಧ್ಯಕ್ಷ ಪ್ರಕಾಶಗೌಡ ಪಾಟೀಲ ವಹಿಸಿದ್ದರು. ಉಪಾಧ್ಯಕ್ಷೆ ನೀಲವ್ವ ಬಡ್ನಿ, ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್‌ಸಾಬ್ ಬಬರ್ಚಿ, ಕುರ್ತಕೋಟಿ ಗ್ರಾ.ಪಂ ಅಧ್ಯಕ್ಷ ಅಪ್ಪಣ್ಣ ಇನಾಮತಿ, ರವಿ ಮೂಲಿಮನಿ, ಎನ್.ಜೆ ಕುರಹಟ್ಟಿ, ಶಿವಪ್ರಕಾಶ ಮಣಕವಾಡ, ನಾರಾಯಣರಾವ್ ವಶೇಕರ್, ಕನಕಪ್ಪ ಹಾದಿಮನಿ, ಹೆಚ್.ಬಿ. ಹದಲಿ, ಕೆ.ಎಲ್. ಪೂಜಾರ, ವಿನೋದ ಹೂಗಾರ, ಹೈದರ ಅಲಿ ನದಾಫ್, ಶರಣಪ್ಪ, ಯಲ್ಲಪ್ಪ ಕುರಹಟ್ಟಿ, ಅಂದಾನಪ್ಪ ಚಿಂಚಲಿ, ರಾಘವೇಂದ್ರ ಓಶೇಕರ, ಪ್ರವೀಣ ಚಾಕಲಬ್ಬಿ, ನಿಂಗಪ್ಪ ಅಮ್ಮಾಗಿ, ಮುದುಕಪ್ಪ ಮನಕವಾಡ, ಪೀರಸಾಬ ನದಾಫ್, ವೈ.ಡಿ. ತಳವಾರ, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಮಲ್ಲಯ್ಯ ಕೆ ಮುಂತಾದವರು ಇದ್ದರು.

---


**ತಾಲೂಕು, ಜಿಲ್ಲಾ ಮಟ್ಟದಲ್ಲಿ ಕ್ರೀಡಾಪಟುಗಳಿಗೆ ಪ್ರೋತ್ಸಾಹ | ನೋಂದಣಿಗೆ ಜ. 20 ಕೊನೆಯ ದಿನ**

# 'ಸಂಸದ ಕ್ರೀಡಾ ಮಹೋತ್ಸವ' 2025-26

■ ವಿಜಯಸಾಕ್ಷಿ ಸುದ್ದಿ, ಗದಗ

ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾಲಿ ಸಂಸದರಾದ ಬಸವರಾಜ ಬೊಮ್ಮಾಯಿ ಪ್ರಸ್ತುತಪಡಿಸುವ 'ಹಾವೇರಿ ಸಂಸದ ಕ್ರೀಡಾ ಮಹೋತ್ಸವ 2025-26'ನ್ನು ಗ್ರಾಮೀಣ ಪ್ರದೇಶದ ಯುವಜನತೆಗೆ ಕ್ರೀಡೆಗಳಲ್ಲಿ ಆಸಕ್ತಿ ಮೂಡಿಸಲು ಹಾಗೂ ಕ್ರೀಡಾಪಟುಗಳಿಗೆ ಪ್ರೋತ್ಸಾಹ ನೀಡುವ ಉದ್ದೇಶದಿಂದ ಹಾಗೂ ಪ್ರತಿ ಸಂಸದರು ಕೂಡಾ ತಮ್ಮ ಲೋಕಸಭಾ ವ್ಯಾಪ್ತಿಯಲ್ಲಿನ ಮಕ್ಕಳಿಗೆ ಮತ್ತು ಯುವಜನತೆಗೆ ಕ್ರೀಡೆಗಳಲ್ಲಿ ಪ್ರೋತ್ಸಾಹ ನೀಡಬೇಕೆಂಬ ನಿಟ್ಟಿನಲ್ಲಿ ಕೇಂದ್ರ ಸರ್ಕಾರವು ಲೋಕಸಭಾ ವ್ಯಾಪ್ತಿಯಲ್ಲಿ ಸಂಸದ ಕ್ರೀಡಾ ಮಹೋತ್ಸವವನ್ನು ತಾಲೂಕು ಹಾಗೂ ಜಿಲ್ಲಾ ಮಟ್ಟದಲ್ಲಿ ಸಂಘಟಿಸಲು ಸೂಚಿಸಿದೆ.

ಸಂಸದ ಕ್ರೀಡಾ ಮಹೋತ್ಸವವನ್ನು ತಾಲೂಕು ಮಟ್ಟದಲ್ಲಿ ಗದಗ ಜಿಲ್ಲೆಯ 7 ತಾಲೂಕುಗಳಲ್ಲಿ



ಆಯೋಜಿಸಲಾಗುತ್ತಿದ್ದು, ಗದಗ ತಾಲೂಕಿನಲ್ಲಿ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣ, ರೋಣ ತಾಲೂಕಿನಲ್ಲಿ ದ್ರೋಣಾಚಾರ್ಯ ತಾಲೂಕು ಕ್ರೀಡಾಂಗಣ, ಶಿರಹಟ್ಟಿ ತಾಲೂಕಿನಲ್ಲಿ ಎಫ್.ಎಂ. ಡಬಾಲಿ ತಾಲೂಕು ಕ್ರೀಡಾಂಗಣ, ಮುಂಡರಗಿ ತಾಲೂಕಿನಲ್ಲಿ ಅನ್ನದಾನೀಶ್ವರ ತಾಲೂಕು ಕ್ರೀಡಾಂಗಣ, ನರಗುಂದ ತಾಲೂಕಿನಲ್ಲಿ ತಾಲೂಕು ಕ್ರೀಡಾಂಗಣ, ಲಕ್ಷ್ಮೇಶ್ವರ ತಾಲೂಕಿನಲ್ಲಿ ಉಮಾ ಮಹಾವಿದ್ಯಾಲಯದ ಮೈದಾನ ಮತ್ತು ಗಜೇಂದ್ರಗಡ ತಾಲೂಕಿನಲ್ಲಿ ಎಸ್.ಎಂ. ಭೂಮರೆಡ್ಡಿ ಶಿಕ್ಷಣ ಸಂಸ್ಥೆಯ ಮೈದಾನದಲ್ಲಿ ತಾಲೂಕು ಮಟ್ಟದ ಕ್ರೀಡಾಕೂಟಗಳನ್ನು ಆಯೋಜಿಸಲಾಗುತ್ತಿದೆ.

100, 400 ಮೀ ಓಟ, ಗುಂಡು ಎಸೆತ, ಉದ್ದ ಜಿಗಿತ, 4*100 ಮೀಟರ್ ರಿಲೇ ವಯುಕ್ತಿಕ ಕ್ರೀಡೆಗಳನ್ನು ಹಾಗೂ ಗುಂಪು ಆಟಗಳಾದ ವಾಲಿಬಾಲ್, ಖೋ-ಖೋ ಮತ್ತು ಕಬಡ್ಡಿ, ಮಲ್ಲಕಂಬ (ಜಿಲ್ಲಾ ಮಟ್ಟದಲ್ಲಿ ಮಾತ್ರ) ಆಟಗಳನ್ನು 17ರಿಂದ 25 ವಯೋಮಿತಿಯ ಬಾಲಕ/ಬಾಲಕಿಯರಿಗೆ ಪ್ರತ್ಯೇಕವಾಗಿ ಆಯೋಜಿಸಲಾಗುತ್ತದೆ. ಸದರಿ ಮಹೋತ್ಸವದಲ್ಲಿ ಭಾಗವಹಿಸುವ ಕ್ರೀಡಾಪಟುಗಳು bommai.basavaraj@sansad.nic.in/smDVhcQvJ https://sansad.nic.injsmDVHcQvj https://sansadkhelmahotsav.in/ ಲಿಂಕ್ ಮುಖಾಂತರ ಕೆಳಕಾಣಿಸಿದ ಕ್ಯೂಆರ್ ಕೋಡ್ ಬಳಸಿ ಜನವರಿ 20ರೊಳಗಾಗಿ ಹೆಸರನ್ನು ನೋಂದಾಯಿಸಿ ಭಾಗವಹಿಸುವುದು ಕಡ್ಡಾಯವಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಶರಣು ಗೋಗೇರಿ ತಿಳಿಸಿದ್ದಾರೆ.

ನಿಗದಿತ ಸಮಯಕ್ಕೆ ಹಾಜರಿದ್ದ ಕ್ರೀಡಾಪಟುಗಳಿಗೆ ಮಾತ್ರ ಅವಕಾಶ ನೀಡಲಾಗುವುದು.

ಕ್ರೀಡಾಪಟುಗಳು ಒಂದೇ ತಾಲೂಕಿನ ಒಂದೇ ಊರಿನ ಆಟಗಾರರಾಗಿರಬೇಕು. ಮದ್ಯ/ಮಾದಕ ವಸ್ತುಗಳನ್ನು ಸೇವಿಸಿದ ಆಟಗಾರರ ತಂಡವನ್ನು ಕೂಡಲೇ ನಿಷೇಧಿಸಲಾಗುವುದು.


ಹೆಚ್ಚಿನ ಮಾಹಿತಿಗಾಗಿ ಮಂಜುನಾಥ ಬಾಗಡೆ, ಹಾಕಿ ತರಬೇತುದಾರರು ಮೊಬೈಲ್ ನಂ-9036533909, ವಿದ್ಯಾ ಕುಲಕರ್ಣಿ, ಸೈಕ್ಲಿಂಗ್ ತರಬೇತುದಾರರು, ಮೊಬೈಲ್ ನಂ-8951936636, ಸುರೇಶ ಸಂಗಮದ, ಮೊಬೈಲ್ ನಂ-9060703554 ಇವರನ್ನು ಸಂಪರ್ಕಿಸಬಹುದಾಗಿದೆ.

> ಒಂದು ತಾಲೂಕಿನಲ್ಲಿ ಆಡಿದ ಕ್ರೀಡಾಪಟುಗಳು ಇನ್ನೊಂದು ತಾಲೂಕಿನಲ್ಲಿ ಆಡಲು ಅವಕಾಶ ಇರುವುದಿಲ್ಲ. 17ರಿಂದ 25 ವರ್ಷದ ಕ್ರೀಡಾಪಟುಗಳಿಗೆ ಮಾತ್ರ ಅವಕಾಶವಿರುತ್ತದೆ. ತಾಲೂಕು ಮಟ್ಟದಲ್ಲಿ ನಡೆದ ಕ್ರೀಡೆಗಳಲ್ಲಿ ವೈಯಕ್ತಿಕ ಸ್ಪರ್ಧೆಗಳಲ್ಲಿ ಪ್ರಥಮ ಮತ್ತು ದ್ವಿತೀಯ ಸ್ಥಾನ ಪಡೆದ ಕ್ರೀಡಾಪಟುಗಳು ಹಾಗೂ ಗುಂಪು ಕ್ರೀಡೆಗಳಲ್ಲಿ ಪ್ರಥಮ ಸ್ಥಾನ ಪಡೆದ ಕ್ರೀಡಾಪಟುಗಳು ಜಿಲ್ಲಾ ಮಟ್ಟದಲ್ಲಿ ಭಾಗವಹಿಸಲು ಅವಕಾಶವಿರುತ್ತದೆ. ಮೂಲ ಆಧಾರ್ ಕಾರ್ಡ್ ಕಡ್ಡಾಯವಾಗಿ ಹಾಜರಪಡಿಸಬೇಕು. ಖೋಖೋ, ಕಬಡ್ಡಿ ಮತ್ತು ವಾಲಿಬಾಲ್ ಪಂದ್ಯಾವಳಿಗಳನ್ನು ಮಣ್ಣಿನ ಮೈದಾನದಲ್ಲಿ ಅಡಿಸಲಾಗುವುದು. ಎಲ್ಲಾ ಕ್ರೀಡೆಗಳಲ್ಲಿ ಮಹಿಳೆಯರು ಮತ್ತು ಪುರುಷರಿಗೆ ಭಾಗವಹಿಸಲು ಅವಕಾಶವಿರುತ್ತದೆ. ನಿರ್ಣಾಯಕರ ನಿರ್ಣಯವೇ ಅಂತಿಮ ನಿರ್ಣಯವಾಗಿರುತ್ತದೆ.

---

**ಹೂವಿನಶಿಗ್ಲಿಯಲ್ಲಿ 8 ಜೋಡಿ ಸಾಮೂಹಿಕ ವಿವಾಹ**

## ಮಠಗಳ ಸಾನ್ನಿಧ್ಯದಲ್ಲಿ ಪವಿತ್ರ ಬಂಧನಕ್ಕೆ ಸಾಕ್ಷಿಯಾದ ಸಾವಿರಾರು ಭಕ್ತರು




■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ವಿವಾಹವೆಂದರೆ ಎರಡು ಮನಸ್ಸುಗಳ ಏಕತ್ವ, ಜೀವನಪಥದಲ್ಲಿ ಪರಸ್ಪರ ಸಹಕಾರ ಮತ್ತು ಪ್ರೀತಿಯಿಂದ ಸಾಗುವ ಪವಿತ್ರ ಬಂಧನ ಎಂದು ಸವಣೂರು ದೊಡ್ಡಹುಣಸೇಮಠದ ಚನ್ನಬಸವ ಸ್ವಾಮೀಜಿ ಹೇಳಿದರು.

ಲಕ್ಷ್ಮೇಶ್ವರ ಸಮೀಪದ ಹೂವಿನಶಿಗ್ಲಿ ವಿರಕ್ತಮಠದ 47ನೇ ಜಾತ್ರಾ ಮಹೋತ್ಸವದ ಅಂಗವಾಗಿ ಗುರುವಾರ ನಡೆದ 8 ಜೋಡಿ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು. ಪವಿತ್ರ ಕ್ಷೇತ್ರದಲ್ಲಿ ಸಾವಿರಾರು ಭಕ್ತರ ಆಶೀರ್ವಾದದೊಂದಿಗೆ ವಿವಾಹ ಬಂಧನಕ್ಕೊಳಗಾಗುವ ಕ್ಷಣ ಜೀವನದ ಅತ್ಯಂತ ಸಾರ್ಥಕ ಘಟ್ಟವಾಗಿದ್ದು, ನವದಂಪತಿಗಳು ತಂದೆ-ತಾಯಿ, ಗುರುಹಿರಿಯರಿಗೆ ವಿಧೇಯರಾಗಬೇಕು ಎಂದು ಸಲಹೆ ನೀಡಿದರು.

ಸಂಸಾರವನ್ನು ಪ್ರೀತಿ, ವಿಶ್ವಾಸ ಮತ್ತು ಸಹನಶೀಲತೆಯಿಂದ ನಡೆಸಿದರೆ ಮನೆ ಸ್ವರ್ಗವಾಗುತ್ತದೆ. ಸಂಸ್ಕೃತಿ, ಸಂಪ್ರದಾಯ ಮತ್ತು ಧಾರ್ಮಿಕ ಮೌಲ್ಯಗಳನ್ನು ಅಳವಡಿಸಿಕೊಂಡು ಸಾತ್ವಿಕ ಜೀವನ ನಡೆಸಬೇಕೆಂದು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಚನ್ನವೀರ ಸ್ವಾಮೀಜಿ ಮಾತನಾಡಿ, ಸಾಮೂಹಿಕ ವಿವಾಹಗಳು ಬಡ ಮತ್ತು ಅಸಹಾಯಕರಿಗೆ ಆರ್ಥಿಕ ಭಾರ ಕಡಿಮೆ ಮಾಡುವ ಮಹತ್ವದ ಸಾಮಾಜಿಕ ಕಾರ್ಯವಾಗಿದೆ. ದುಂದು ವೆಚ್ಚ, ಆಡಂಬರ ಹಾಗೂ ವರದಕ್ಷಣೆ ವಿರುದ್ಧ ಜಾಗೃತಿ ಮೂಡಿಸುವ ಉದ್ದೇಶದಿಂದ ಶ್ರೀಮಠ ಈ ಕಾರ್ಯವನ್ನು ನಿರಂತರವಾಗಿ ನಡೆಸುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ನವಲಗುಂದ ಗವಿಮಠದ ಬಸವಲಿಂಗ ಸ್ವಾಮೀಜಿ, ಗುಡ್ಡದನ್ವೇರಿ ವಿರಕ್ತಮಠದ ಶಿವಯೋಗೀಶ್ವರ ಸ್ವಾಮೀಜಿ, ಹಿರೇಮಲ್ಲನಕೇರಿ ವಿರಕ್ತಮಠದ ಅಭಿನವ ಚನ್ನಬಸವ ಸ್ವಾಮೀಜಿ ಸೇರಿದಂತೆ ಹಲವಾರು ಮಠಾಧೀಶರು, ಗಣ್ಯರು ಹಾಗೂ ಭಕ್ತರು ಭಾಗವಹಿಸಿದ್ದರು.

---

## ಬಳಗಾನೂರಿನ ಶರಣ ಬಳಗದವರು ಆತ್ಮದಲ್ಲಿ ಭಕ್ತಿಯನ್ನು ಬೆಳೆಸಿದ್ದಾರೆ: ಶ್ರೀ ಶಿವಶಾಂತವೀರ ಶರಣರು



■ ವಿಜಯಸಾಕ್ಷಿ ಸುದ್ದಿ, ಗದಗ

ರೈತನು ಭೂಮಿಯಲ್ಲಿ ಬೆಳೆಯನ್ನು ಬೆಳೆಯುವಂತೆ, ಬಳಗಾನೂರಿನ ಶರಣ ಬಳಗದವರು ಆತ್ಮದಲ್ಲಿ ಭಕ್ತಿಯನ್ನು ಬೆಳೆಸಿದ್ದಾರೆ ಎಂದು ಬಳಗಾನೂರಿನ ಚನ್ನವೀರ ಶರಣರ ಶ್ರೀಮಠದ ಪೂಜ್ಯ ಶ್ರೀ ಶಿವಶಾಂತವೀರ ಶರಣರು ಹೇಳಿದರು.

ಚಿಕೇನಕೊಪ್ಪದ ಚನ್ನವೀರ ಶರಣರ 31ನೇ ಪುಣ್ಯಸ್ಮರಣೋತ್ಸವ ಮತ್ತು ಶ್ರೀಮಠದ ಜಾತ್ರಾ ಮಹೋತ್ಸವದ ಅಂಗವಾಗಿ ಗುರುವಾರ ನಡೆದ ಪಾದಯಾತ್ರೆಯಲ್ಲಿ ಅವರು ಮಾತನಾಡಿದರು. ಬಳಗಾನೂರು ಗ್ರಾಮವು ಗಾತ್ರದಲ್ಲಿ ಚಿಕ್ಕದಾದರೂ ಹೃದಯ ಶ್ರೀಮಂತಿಕೆಯಲ್ಲಿ ಬಹಳ ದೊಡ್ಡದು. ಭಕ್ತಿ, ಧರ್ಮ, ಸಂಸ್ಕಾರ ಮತ್ತು ಸಂಸ್ಕೃತಿಯನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದೇ ಈ ಪಾದಯಾತ್ರೆಯ ಉದ್ದೇಶ ಎಂದು ಹೇಳಿದರು.

ಶರಣರ ದೃಷ್ಟಿಯಲ್ಲಿ ಸಂಸಾರ ಗಾಳಿಗೆ ಅಲುಗುವ ದೀಪದಂತಿದ್ದು, ಚಿನ್ನ, ಬೆಳ್ಳಿ, ಭೂಮಿ ಮತ್ತು ಭೌತಿಕ ಸಂಪತ್ತು ಶಾಶ್ವತವಲ್ಲ. ದೇವರ ಕೃಪೆ, ದಾನ-ಧರ್ಮ ಮತ್ತು ಸೇವೆಯೇ ನಿಜವಾದ ಸುಖವನ್ನು ನೀಡುತ್ತದೆ ಎಂದು ತಿಳಿಸಿದರು.

ಈ ಸಂದರ್ಭ ಸೊರಟೂರು-ಮಲ್ಲಗಿರಿಸಮುದ್ರದ ಓಂಕಾರೇಶ್ವರ ಶ್ರೀಮಠದ ಪೂಜ್ಯ ಶ್ರೀ ಪಕೀರೇಶ್ವರ ಶ್ರೀಗಳು ಮಾತನಾಡಿ, ಪಾದಯಾತ್ರೆಯಿಂದ ಮನಸ್ಸು ಮತ್ತು ದೇಹಕ್ಕೆ ಶಾಂತಿ ಸಿಗುತ್ತದೆ. ದಾಸೋಹ, ಸ್ವಚ್ಛತೆ, ಸೇವೆ ಮಾಡಿದರೆ ಶರಣರು ಜ್ಞಾನ ಬೆಳಕು ನೀಡುತ್ತಾರೆ ಎಂದರು.

ಪಾದಯಾತ್ರೆಯಲ್ಲಿ ವಚನಗಾನ, ಭಕ್ತಿ ಗೀತೆಗಳು ಭಕ್ತಿಮಯ ವಾತಾವರಣವನ್ನು ಸೃಷ್ಟಿಸಿತು. ಸೇವಾ ಭಜನಾ ಸಂಘದವರು ಸಾಥ್ ನೀಡಿದರು. ಮಾರ್ಗದ ತುಂಬಾ ರಂಗೋಲಿ, ದೀಪಾಲಂಕಾರ ಮತ್ತು ತೋರಣಗಳಿಂದ ಶ್ರೀಗಳನ್ನು ಭಕ್ತಿಯಿಂದ ಬರಮಾಡಿಕೊಳ್ಳಲಾಯಿತು.

---

**ಹೊಸಹಳ್ಳಿಯಲ್ಲಿ ಎನ್‌ಎಸ್‌ಎಸ್ ವಿಶೇಷ ಶಿಬಿರ ಸಮಾರೋಪ ಸಮಾರಂಭ**

## ಸಮಾಜಮುಖಿ ಚಿಂತನೆಗೆ ಯುವಕರಿಗೆ ಪ್ರೇರಣೆ

■ ವಿಜಯಸಾಕ್ಷಿ ಸುದ್ದಿ, ಹುಲಕೋಟಿ

ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಎನ್‌ಎಸ್‌ಎಸ್ ಘಟಕವು ಹೊಸಹಳ್ಳಿ ಗ್ರಾಮದಲ್ಲಿ ಆಯೋಜಿಸಿದ್ದ 2025-26ನೇ ಸಾಲಿನ ವಾರ್ಷಿಕ ವಿಶೇಷ ಶಿಬಿರವು ಸಮಾಜಮುಖಿ ಚಿಂತನೆಯೊಂದಿಗೆ ಯಶಸ್ವಿಯಾಗಿ ಸಮಾರೋಪಗೊಂಡಿತು.




ಸಮಾರೋಪ ಸಮಾರಂಭದ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದ ನಿವೃತ್ತ ಮುಖ್ಯೋಪಾಧ್ಯಾಯ ಆರ್.ಎಫ್. ಲೊಟಗೇರಿ, ಎನ್‌ಎಸ್‌ಎಸ್ ಶಿಬಿರಗಳು ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಕ್ಕೆ ಮತ್ತು ಸಮಾಜದೊಂದಿಗೆ ನೇರ ಸಂಪರ್ಕ ಬೆಳೆಸಲು ಅತ್ಯುತ್ತಮ ವೇದಿಕೆಗಳಾಗಿವೆ ಎಂದು ಹೇಳಿದರು. ಯುವಕರು ಸಮಾಜಸೇವೆಯಲ್ಲಿ ತೊಡಗಿಸಿಕೊಳ್ಳಬೇಕು ಎಂಬ ಅಗತ್ಯವನ್ನು ಅವರು ಒತ್ತಿ ಹೇಳಿದರು.

ನಿವೃತ್ತ ಕನ್ನಡ ಪ್ರಾಧ್ಯಾಪಕ ಡಾ. ಶರಣಬಸವ ವೆಂಕಟಾಪುರ ಮಾತನಾಡಿ, ಇಂತಹ ಶಿಬಿರಗಳು ಶಿಸ್ತು, ಸೇವಾಭಾವನೆ ಮತ್ತು ನಾಯಕತ್ವ ಗುಣಗಳನ್ನು ಬೆಳೆಸುತ್ತವೆ ಎಂದು ಅಭಿಪ್ರಾಯಪಟ್ಟರು. ಸಮಾಜಸೇವೆಯನ್ನು ಜೀವನಪೂರ್ತಿ ಪಾಲಿಸಬೇಕು ಎಂದು ಸಲಹೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲೆ ಡಾ. ಸುಧಾ ಕೌಜಗೇರಿ, ಶಿಬಿರವು ಸ್ವಯಂಸೇವಕರಲ್ಲಿ ಸಾಮಾಜಿಕ ಜವಾಬ್ದಾರಿ ಮತ್ತು ಮಾನವೀಯ ಮೌಲ್ಯಗಳನ್ನು ಬಲಪಡಿಸಿದೆ ಎಂದು ಹೇಳಿದರು. ಶಿಬಿರದ ಯಶಸ್ಸಿಗೆ ಶ್ರಮಿಸಿದ ಸ್ವಯಂಸೇವಕರು ಮತ್ತು ಅಧಿಕಾರಿಗಳನ್ನು ಅಭಿನಂದಿಸಿದರು.

ಸಹಶಿಬಿರಾಧಿಕಾರಿ ಎಸ್. ವಿಜಯಕುಮಾರ, ಏಳು ದಿನಗಳ ಶಿಬಿರದಲ್ಲಿ ಗ್ರಾಮ ಸ್ವಚ್ಛತೆ, ಆರೋಗ್ಯ ಜಾಗೃತಿ, ಜಲ ಸಂರಕ್ಷಣೆ, ಡಿಜಿಟಲ್ ಸಾಕ್ಷರತೆ, ಮಾದಕವಸ್ತು ವಿರೋಧ ಜಾಗೃತಿ, ಮಹಿಳಾ ಸಬಲೀಕರಣ, ಸಾಮಾಜಿಕ ಸಮಸ್ಯೆಗಳ ಕುರಿತು ಉಪನ್ಯಾಸಗಳು ಹಾಗೂ ಶ್ರಮದಾನ ಕಾರ್ಯಕ್ರಮಗಳು ನಡೆದವು ಎಂದು ವಿವರಿಸಿದರು. ದೀಪೋತ್ಸವ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ಭಾವನಾತ್ಮಕವಾಗಿದ್ದವು ಎಂದರು.

ಶಿಬಿರದ ಯಶಸ್ಸಿಗೆ ಸಹಕರಿಸಿದ ಗ್ರಾಮ ಪಂಚಾಯತಿ ಸದಸ್ಯರು, ಶಾಲಾ ಶಿಕ್ಷಕರು, ಆಹಾರದಾನಿಗಳು ಮತ್ತು ಮಾಧ್ಯಮ ಪ್ರತಿನಿಧಿಗಳಿಗೆ ಶಿಬಿರಾಧಿಕಾರಿ ಪ್ರೊ. ಅಪ್ಪಣ್ಣ ಹಂಜೆ ಕೃತಜ್ಞತೆ ಸಲ್ಲಿಸಿದರು. ವಿಶೇಷ ಸಹಕಾರ ನೀಡಿದ ಎನ್.ಆರ್. ಕಮತ, ಡಿ.ಎಸ್. ತಳವಾರ ಹಾಗೂ ಸುಮಿತ ಮ್ಯಾಗೇರಿ ಅವರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮವನ್ನು ಸಹಶಿಬಿರಾಧಿಕಾರಿ ಭೀಮೇಶ ನಿರ್ವಹಿಸಿದರು.

---

## ಬಿಜೆಪಿಗೆ ದಿಗ್ವಿಜಯ ನೀಡಿದ 'ಮಹಾ' ಜನತೆ



■ ವಿಜಯಸಾಕ್ಷಿ ಸುದ್ದಿ, ಗದಗ

ಮಹಾರಾಷ್ಟ್ರ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಜನತೆ ನರೇಂದ್ರ ಮೋದಿ ನೇತೃತ್ವದ ಬಿಜೆಪಿಗೆ ದಿಗ್ವಿಜಯ ನೀಡಿದ್ದು, ಇದು ಭಾರತೀಯರ ಮನಸ್ಥಿತಿಯ ಸಂಕೇತವಾಗಿದೆ ಎಂದು ಬಿಜೆಪಿ ಮುಖಂಡ ವಿಜಯಕುಮಾರ ಗಡ್ಡಿ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಮುಂಬೈ ಸೇರಿದಂತೆ ಮಹಾರಾಷ್ಟ್ರದಾದ್ಯಂತ ಕಮಲ ಅರಳಿದ್ದು, ಜನರು ಅವಕಾಶವಾದಿ ಶಿವಸೇನೆ ಬಣವನ್ನು ಧಿಕ್ಕರಿಸಿ ಏಕನಾಥ ಶಿಂಧೆ ಹಾಗೂ ದೇವೇಂದ್ರ ಫಡ್ನವಿಸ್ ಜೋಡಿಗೆ ಜೈಕಾರ ಹಾಕಿದ್ದಾರೆ.

ದೇಶದಲ್ಲಿ ಪ್ರಧಾನಿ ಮೋದಿ ಅವರ ಜನಪ್ರಿಯತೆ ಕಡಿಮೆಯಾಗುತ್ತಿದೆ ಎಂದೆಲ್ಲ ಭ್ರಮೆಪಡುತ್ತಿರುವ ಕಾಂಗ್ರೆಸ್ ಸೇರಿದಂತೆ ಪ್ರತಿಪಕ್ಷಗಳಿಗೆ ಈ ಫಲಿತಾಂಶ ತಕ್ಕ ಉತ್ತರವಾಗಿದೆ. ಪ್ರಧಾನಿ ಮೋದಿ ಹಾಗೂ ಗೃಹ ಸಚಿವ ಅಮಿತ್ ಷಾ ಮೇಲೆ ದೇಶದ ಜನರಿಗೆ ಅಚಲವಾದ ನಂಬಿಕೆ ಇದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

---

## ಜ.19ಕ್ಕೆ ಸೈನಿಕ ತರಬೇತಿ ಕೇಂದ್ರ ಆರಂಭ




■ ವಿಜಯಸಾಕ್ಷಿ ಸುದ್ದಿ, ಗದಗ

ನಗರದಲ್ಲಿ ಜ. 19ರಂದು ಬೆಳಿಗ್ಗೆ 10.30ಕ್ಕೆ ಸೈನಿಕ ತರಬೇತಿ ಕೇಂದ್ರ ಆರಂಭವಾಗಲಿದೆ ಎಂದು ಸಂಘದ ಜಿಲ್ಲಾಧ್ಯಕ್ಷ ಜಿ.ಬಿ. ಮಾಲಗತ್ತಿಮಠ ಹೇಳಿದರು.

ನಗರದ ಪತ್ರಿಕಾಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಆದಿತ್ಯ ನಗರದಲ್ಲಿ 5 ಗುಂಟೆ ಜಾಗೆಯಲ್ಲಿ ಸಮುದಾಯದ ಭವನ ನಿರ್ಮಿಸಲಾಗಿದೆ. ಸಮುದಾಯ ಭವನದಲ್ಲಿ ತರಬೇತಿ ಕೇಂದ್ರ ಆರಂಭಿಸಲಾಗುತ್ತಿದ್ದು, ತಜ್ಞರು ತರಬೇತಿ ನೀಡುವರು ಎಂದರು.

ನಗರದಲ್ಲಿ ಯುವಕರಿಗೆ ತರಬೇತಿಯ ಕೊರತೆ ಇದೆ. ಸೇನೆಯ ಬಗ್ಗೆ ಜಾಗೃತಿ ಮೂಡಿಸುವವರು ಇಲ್ಲವಾಗಿದೆ. ಯುವಕರಿಗೆ ಜಾಗೃತಿ ಜೊತೆಗೆ ಬಿಎಸ್‌ಎಫ್, ಅಗ್ನಿವೀರ ಹಾಗೂ ಕೇಂದ್ರ ಯೋಜನೆಗಳ ಬಗ್ಗೆ ತರಬೇತಿ ನೀಡಲಾಗುವುದು. ಜಿಲ್ಲಾದ್ಯಂತ ಶಾಲಾ-ಕಾಲೇಜುಗಳಲ್ಲಿ ಈ ಬಗ್ಗೆ ಅರಿವು ಮೂಡಿಸಲಾಗುವುದು ಎಂದರು. ಜ. 18ರಂದು ಯುವಕರಿಗೆ ಪೂರ್ವಭಾವಿ ಪರೀಕ್ಷೆ ನಡೆಸಲಾಗುವುದು. ಪರೀಕ್ಷೆಯಲ್ಲಿ ಪ್ರಥಮ, ದ್ವಿತೀಯ, ತೃತೀಯ ಸ್ಥಾನ ಪಡೆದವರಿಗೆ ಬಹುಮಾನ ನೀಡಲಾಗುವುದು. ಪ್ರಶ್ನೆಪತ್ರಿಕೆಯನ್ನು ಅಗ್ನಿವೀರ ಮಾದರಿಯಲ್ಲೇ ಸಿದ್ಧಪಡಿಸಲಾಗಿದೆ. ತರಬೇತಿ ಕೇಂದ್ರದಲ್ಲೇ ಊಟ-ವಸತಿ ನೀಡಲಾಗುವುದು. ಮೂರು ತಿಂಗಳ ಅವಧಿಗೆ ತರಬೇತಿ ಇರುತ್ತದೆ ಎಂದು ಜಿ.ಬಿ. ಮಾಲಗತ್ತಿಮಠ ತಿಳಿಸಿದರು. ಫಕ್ಕಿರೇಶ್ವರ ಶ್ರೀಗಳು, ಸಂಗಮೇಸ ದುಂದೂರು, ಸಿದ್ದಣ್ಣ ಪಲ್ಲೇದ ಸೇರಿದಂತೆ ಇತರರು ಉಪಸ್ಥಿತರಿರುವರು ಎಂದು ತಿಳಿಸಿದರು. ಸುದೀರ್ಘ ಗೋರ್ಪಡೆ, ಎಸ್.ಆರ್. ಪಾಟೀಲ, ಸಿ.ಜಿ. ಸೊನ್ನದ, ಶೇಖಪ್ಪ ಹೊನ್ನಪ್ಪನವರ, ಚನ್ನಯ್ಯ ಬಳಗಾನೂರುಮಠ, ಕುಮಾರಸ್ವಾಮಿ ಹಿರೇಮಠ, ಜಿ.ಬಿ. ಅರವಟಗಿಮಠ, ಎ.ಎಂ. ತಹಸೀಲ್ದಾರ, ಸಿದ್ದಪ್ಪ ಹೂಗಾರು, ವೀಣಾ ಹೂಗಾರ ಇತರರು ಇದ್ದರು.

---

## ಕ್ರೀಡೆ ವಿದ್ಯಾರ್ಥಿಗಳ ಅವಿಭಾಜ್ಯ ಅಂಗವಾಗಲಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸದೃಢವಾದ ದೇಹದಲ್ಲಿ ಸದೃಢವಾದ ಮನಸ್ಸು ನೆಲೆಗೊಳ್ಳುತ್ತದೆ. ಈ ನಿಟ್ಟಿನಲ್ಲಿ ಕ್ರೀಡೆ ವಿದ್ಯಾರ್ಥಿಗಳ ಜೀವನದ ಅವಿಭಾಜ್ಯ ಅಂಗವಾಗಬೇಕು ಎಂದು ಒಡೆಯರ ಮಲ್ಲಾಪುರ ಗ್ರಾ.ಪಂ ಸದಸ್ಯ ಪದ್ಮರಾಜ ಪಾಟೀಲ ಹೇಳಿದರು.




ಅವರು ಲಕ್ಷ್ಮೇಶ್ವರ ತಾಲೂಕಿನ ಒಡೆಯರ ಮಲ್ಲಾಪೂರ ಗ್ರಾಮದ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ವಾರ್ಷಿಕ ಕ್ರೀಡಾಕೂಟ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಕ್ರೀಡೆಯನ್ನು ರೂಢಿಸಿಕೊಳ್ಳುವುದರಿಂದ ದೇಹ, ಮನಸ್ಸು ಮತ್ತು ಬುದ್ಧಿಯ ವಿಕಾಸದ ಜೊತೆಗೆ ಹೊಸ ಚೈತನ್ಯ, ವ್ಯಕ್ತಿತ್ವ ವಿಕಸನ, ಶಿಸ್ತು, ನಾಯಕತ್ವ ಗುಣ, ಸ್ಪರ್ಧಾತ್ಮಕ ಮನೋಭಾವ ಬೆಳೆಸುವಲ್ಲಿ ಉತ್ತಮ ಸಾಧನವಾಗಿದೆ ಎಂದರು.

ಪ್ರಾಚಾರ್ಯ ನಾಗರಾಜ ಕಳಸಾಪುರ ಮಾತನಾಡಿ, ವಿದ್ಯಾರ್ಥಿಗಳು ಪಠ್ಯ ಶಿಕ್ಷಣದ ಜೊತೆಗೆ ಕ್ರೀಡಾ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವುದರಿಂದ ವಿದ್ಯಾರ್ಥಿಗಳ ದೈಹಿಕ, ಮಾನಸಿಕ ಆರೋಗ್ಯದ ಸದೃಢತೆ ಜತೆಗೆ ಪರಸ್ಪರ ಸ್ನೇಹ, ಬಾಂಧವ್ಯ, ಸೌಹಾರ್ದತೆ, ನಾಯಕತ್ವ ಗುಣ ಹೊಂದಲು ಸಾಧ್ಯವಾಗುತ್ತದೆ. ಆದ್ದರಿಂದ ಪ್ರತಿಯೊಬ್ಬ ವಿದ್ಯಾರ್ಥಿಗಳು ಕೀಳರಿಮೆ, ಹಿಂಜರಿಕೆಯಿಂದ ಹೊರಬಂದು ಕ್ರೀಡೆಯಲ್ಲಿ ತೊಡಗಿಸಿಕೊಳ್ಳಬೇಕು ಎಂದು ಹೇಳಿದರು.

ಗ್ರಾ.ಪಂ ಸದಸ್ಯೆ ನಾಗರತ್ನ ಕಡಾರಿ ಮಾತನಾಡಿದರು. ಕ್ರೀಡಾ ನಿರ್ಣಾಯಕರಾಗಿ ಕೆ.ವಾಯ್. ಮುದಗಲ್, ವೀರೇಶ ಕಮ್ಮಾರ ಆಗಮಿಸಿದ್ದರು. ಉಪ ಪ್ರಾಂಶುಪಾಲರಾದ ಎಂ.ಐ. ಡಂಬಳ, ದೈಹಿಕ ಶಿಕ್ಷಕ ಸಿದ್ದರಾಜ ಬೇಟಗೇರಿ, ಶಿಕ್ಷಕ ಎಸ್.ಕೆ. ನಧಾಫ್, ವಿಜಯಲಕ್ಷ್ಮೀ ರಾಠೋಡ, ಡಾ. ಅರ್ಜುನ ವಠಾರ, ಸಿ.ಎನ್. ನಾವಿ, ಪ್ರವೀಣ ಗಾಯಕರ, ಫಾರೂಕ್ ಹಮಸಾಗರ, ಮುಕ್ತಾ ಆದಿ, ಲಕ್ಷ್ಮೀ ಡೊಳ್ಳಿನ ಮತ್ತಿತರರಿದ್ದರು. ಶಿಕ್ಷಕರಾದ ಸೀಮಾ ಮಾಡಳ್ಳಿ, ರೂಪಾ ಮನ್ನಂಗಿ, ಸುನೀಲ ತಳ್ಳಳ್ಳಿ ನಿರೂಪಿಸಿದರು.

## ಭಾರತೀಯ ಹವಾಮಾನ ಇಲಾಖೆಯ ವರ್ಷಾಚರಣೆ




■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಹವಾಮಾನ ಇಲಾಖೆಯ ಸಂಸ್ಥಾಪನಾ (1875–2026) ದಿನವನ್ನು ಗುರುವಾರ ನಗರದ ಸಂಭಾಪೂರ ರಸ್ತೆಯಲ್ಲಿರುವ ಹವಾಮಾನ ಇಲಾಖೆಯ ಕಚೇರಿಯಲ್ಲಿ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಉಸ್ತುವಾರಿ ಅಧಿಕಾರಿ ಪ್ರದೀಪ ಮತ್ತು ಎಲ್ಲಾ ಸಿಬ್ಬಂದಿ, ಸದಸ್ಯರು ಐಎಂಡಿಯ ಇತಿಹಾಸ ಮತ್ತು ಕೆಲಸದ ಬಗ್ಗೆ ವಿವರಿಸಿದರು.

ವೈಜ್ಞಾನಿಕ ಸಹಾಯಕರಾದ ಡಾ. ಎಚ್.ಸಿ. ಕಟ್ಟಿಮನಿ, ಪ್ರೊ. ಅಮಿತ್‌ಕುಮಾರ, ಡಾ. ಪ್ರದೀಪ ಐಎಂಡಿಯ ಕೆಲಸ, ಸ್ವರೂಪ ಮತ್ತು ಮಹತ್ವವನ್ನು ವಿವರವಾಗಿ ತಿಳಿಸಿದರು.

ಇದೇ ವೇಳೆ ಕಚೇರಿ ಸಿಬ್ಬಂದಿಗಳನ್ನು ಸನ್ಮಾನಿಸಲಾಯಿತು. ನಂತರ ಸಂವಾದ ಮತ್ತು ಕಚೇರಿಯ ಆವರಣದಲ್ಲಿ 151ನೇ ವರ್ಷಾಚರಣೆಯ ಅಂಗವಾಗಿ ಸಸಿ ನೆಡಲಾಯಿತು.

### ಪೂರ್ವಭಾವಿ ಸಭೆಯಲ್ಲಿ ಬಸವರಾಜ ಬೆಂಡಿಗೇರಿ ಮಾಹಿತಿ

# ಲಕ್ಷ್ಮೇಶ್ವರದಲ್ಲಿ ಜ. 18ರಂದು ಹಿಂದೂ ಸಮ್ಮೇಳನ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಲಕ್ಷ್ಮೇಶ್ವರದ ಹಿಂದೂ ಸಮ್ಮೇಳನ ಸಮಿತಿಯಿಂದ ಜ. 18ರಂದು ಭಾನುವಾರ ಪಟ್ಟಣದಲ್ಲಿ ಹಿಂದೂ ಸಮ್ಮೇಳನ ಮತ್ತು ಬೃಹತ್‌ರ ಶೋಭಾ ಯಾತ್ರೆ ಹಮ್ಮಿಕೊಳ್ಳಲಾಗಿದ್ದು, ಎಲ್ಲ ಹಿಂದೂ ಬಾಂಧವರು ಸ್ವಯಂ ಪ್ರೇರಿತರಾಗಿ ಪಾಲ್ಗೊಳ್ಳಬೇಕೆಂದು ಹಿಂದೂ ಸಮ್ಮೇಳನ ಸಮಿತಿಯ ಗೌರವಾಧ್ಯಕ್ಷ ಬಸವರಾಜ ಬೆಂಡಿಗೇರಿ ಮನವಿ ಮಾಡಿದರು.

ಅವರು ಶುಕ್ರವಾರ ಪಟ್ಟಣದ ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಸಮ್ಮೇಳನದ ಹಿನ್ನೆಲೆಯಲ್ಲಿ ನಡೆಸಿದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿ, ಧರ್ಮೋ ರಕ್ಷತಿ ರಕ್ಷಿತಃ ಎನ್ನುವಂತೆ ಹಿಂದೂ ಧರ್ಮದ ಜಾಗೃತಿ, ರಕ್ಷಣೆ ಮತ್ತು ಧರ್ಮದ ತತ್ವ ಸಿದ್ಧಾಂತ, ಸಂಸ್ಕೃತಿ, ಪರಪಂರೆ, ಮೌಲ್ಯಗಳು ಯುವಕರಲ್ಲಿ ಬಿತ್ತುವ, ಆ ಮೂಲಕ ನಾವೆಲ್ಲ ಒಂದು-ಹಿಂದೂ ಎಂಬ ಸಾಮರಸ್ಯದ ಭಾವನೆ ಮೂಡಿಸುವುದು ಸಮ್ಮೇಳನದ ಉದ್ದೇಶವಾಗಿದೆ.



ಸಮ್ಮೇಳನದ ನಿಮಿತ್ತ ಅಂದು ಮಧ್ಯಾಹ್ನ 3.30ಕ್ಕೆ ಪಟ್ಟಣದ ಹಾವಳಿ ಆಂಜನೇಯ ದೇವಸ್ಥಾನದಿಂದ ಸಕಲ ವಾದ್ಯಮೇಳ, ಪೂರ್ಣಕುಂಭ, ಭಾರತ ಮಾತೆ ಸೇರಿ ವಿವಿಧ ರಾಷ್ಟ್ರ ನಿರ್ಮಾಣಕ್ಕಾಗಿ ಶ್ರಮಿಸಿದ ಮಹಾತ್ಮರ ಭಾವಚಿತ್ರದೊಂದಿಗೆ ಪಟ್ಟಣದ ಪ್ರಮುಖ ಮಾರ್ಗದಲ್ಲಿ ಭವ್ಯ ಶೋಭಾ ಯಾತ್ರೆ ನಡೆಯಲಿದೆ. ಬಳಿಕ ಸಂಜೆ 5ಕ್ಕೆ ಶ್ರೀ ಸೋಮೇಶ್ವರ ತೇರಿನ ಮನೆ ಆವರಣದಲ್ಲಿ ಹಿಂದೂ ಸಮ್ಮೇಳನ-ಧರ್ಮ ಜಾಗೃತಿ ಸಭೆ ನಡೆಯಲಿದೆ. ಗದಗನ ಶ್ರೀ ರಾಮಕೃಷ್ಣ ಆಶ್ರಮದ ಶ್ರೀ ಸ್ವಾಮಿ ನಿರ್ಭಯಾನಂದ ಸರಸ್ವತಿ ಸಾನ್ನಿಧ್ಯ ವಹಿಸುವರು. ಹಿಂದೂ ಸಮ್ಮೇಳನ ಸಮಿತಿಯ ಅಧ್ಯಕ್ಷರಾದ ಚಂದ್ರಣ್ಣ ಮಹಾಜನಶೆಟ್ಟರ ಅಧ್ಯಕ್ಷತೆ ವಹಿಸುವರು.

ಹಿಂದೂ ಸಂಘಟನೆಯ ಪ್ರಮುಖ ಗೋವಿಂದಪ್ಪ ಗೌಡಪ್ಪಗೋಳ ದಿಕ್ಸೂಚಿ ಭಾಷಣ ಮಾಡುವರು. ಬೆಳಿಗ್ಗೆ ಪಟ್ಟಣದ ಬಸ್ತಿಬಣದಿಂದ ಹಿಂದೂಪರ ಸಂಘಟನೆಗಳ ಯುವಕರಿಂದ ಬೈಕ್ ರ‍್ಯಾಲಿ ನಡೆಯಲಿದೆ ಎಂದರು.

ಸಂಘಟನಾ ಪ್ರಮುಖರಾದ ರಾಮರಾವ್ ವೆರ್ಣೇಕರ ಮಾತನಾಡಿ, ಹಿಂದೂ ಸಮ್ಮೇಳನದ ಯಶಸ್ವಿಗಾಗಿ ಈಗಾಗಲೇ ಹತ್ತಾರು ಗ್ರಾಮಗಳು, ವಿವಿಧ ಧರ್ಮ ಸಮಾಜಗಳ ಪ್ರಮುಖರನ್ನು ಭೇಟಿ ಮಾಡಿ ಮನವಿ ಮಾಡಿಕೊಳ್ಳಲಾಗಿದೆ. ಎಲ್ಲರೂ ಅತ್ಯಂತ ಆಸಕ್ತಿ ಮತ್ತು ಸ್ವಯಂ ಪ್ರೇರಣೆಯಿಂದ ಭಾಗವಹಿಸಲಿದ್ದಾರೆ. ಶೋಭಾಯಾತ್ರೆ ಸಂಚರಿಸುವ ಮಾರ್ಗ ಅಲಂಕರಿಸಲಾಗುವುದು. ಸಮ್ಮೇಳನದ ಯಶಸ್ಸಿಗಾಗಿ ಪೂರಕ ಸಿದ್ಧತೆ ಮಾಡಿಕೊಳ್ಳಲಾಗಿದೆ. 8ರಿಂದ 10 ಸಾವಿರ ಹಿಂದೂ ಬಾಂಧವರು ಪಾಲ್ಗೊಳ್ಳಲಿದ್ದಾರೆ ಎಂದು ಹೇಳಿದರು.

ಸಭೆಯಲ್ಲಿ ಸಮಿತಿಯ ಪ್ರಮುಖರಾದ ಬಸವೇಶ ಮಹಾಂತಶೆಟ್ಟರ, ಗುರುರಾಜ ಪಾಟೀಲ ಕುಲಕರ್ಣಿ, ಸುನೀಲ ಮಹಾಂತಶೆಟ್ಟರ, ಚಂದ್ರು ಹಂಪಣ್ಣವರ, ಸೋಮೇಶ ಉಪನಾಳ, ವೈ.ಕೆ. ಲಿಂಗಶೆಟ್ಟಿ, ಚಿಕ್ಕರಸ ಪೂಜಾರ, ಗಜಾನನ ಹೆಗಡೆ, ಅನಿಲ ಮುಳಗುಂದ, ಸಂತೋಷ ಜಾವೂರ, ಬಸವಣ್ಣೆಪ್ಪ ನಂದೆಣ್ಣವರ, ಬಾಳಪ್ಪ ಗೋಸಾವಿ, ಬಂಗಾರೆಪ್ಪ ಮುಳಗುಂದ, ಗಂಗಾಧರ ಮೆಣಸಿನಕಾಯಿ, ಮಂಜು ಹೊಗೆಸೊಪ್ಪಿನ, ಪ್ರವೀಣ ಬೋಮಲೆ, ವಿಜಯ ಕುಂಬಾರ, ವಿರೇಶ ಸಾಲಸವಾಡ, ಶಂಕರ ಬ್ಯಾಡಗಿ, ಪ್ರಶಾಂತ ಮೆಡ್ಲೇರಿ, ನವೀನ ಹಿರೇಮಠ, ಈರಣ್ಣ ಮುಳಗುಂದ, ರವಿ ಕಲ್ಲೂರ, ಸುರೇಶ ಕುರ್ಡೇಕರ ಮುಂತಾದವರಿದ್ದರು.


### ಗದಗದಲ್ಲಿ ಅಲ್ಪಸಂಖ್ಯಾತರ ಕಲ್ಯಾಣಕ್ಕೆ ಮಹತ್ವದ ಹೆಜ್ಜೆ

# 4,586 ಲಕ್ಷ ವೆಚ್ಚದ ಕಾಮಗಾರಿಗಳಿಗೆ ಇಂದು ಭೂಮಿಪೂಜೆ-ಲೋಕಾರ್ಪಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಅಲ್ಪಸಂಖ್ಯಾತ ಸಮುದಾಯದ ಶೈಕ್ಷಣಿಕ ಹಾಗೂ ವಸತಿ ಸೌಲಭ್ಯಗಳನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಗದಗ ವತಿಯಿಂದ ಕೈಗೊಂಡಿರುವ ಒಟ್ಟು 4,586 ಲಕ್ಷ ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿಪೂಜೆ ಹಾಗೂ ಲೋಕಾರ್ಪಣೆಯನ್ನು ವಸತಿ, ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರಾದ ಬಿ ಝಡ್ ಜಮೀರ್ ಅಹ್ಮದ್ ಖಾನ್ ಮತ್ತು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರಾದ ಡಾ. ಎಚ್.ಕೆ. ಪಾಟೀಲ ಅವರು ಶನಿವಾರ ನೆರವೇರಿಸಲಿದ್ದಾರೆ.

ನಗರದ ಗಂಗಿಮಡಿ ಪ್ರದೇಶದಲ್ಲಿ ಕರ್ನಾಟಕ ಮೌಲಾನಾ ಆಜಾದ್ ಪಬ್ಲಿಕ್ ಸ್ಕೂಲ್ (ಇಂಗ್ಲಿಷ್ ಮೀಡಿಯಂ) ಉದ್ಘಾಟನೆಗೆ 235 ಲಕ್ಷ ವೆಚ್ಚ ಮಾಡಲಾಗಿದ್ದು, ಇದೇ ಶಾಲೆಯಲ್ಲಿ ಹೆಚ್ಚುವರಿ ತರಗತಿ ಕೋಣೆಗಳ ನಿರ್ಮಾಣಕ್ಕೆ 142 ಲಕ್ಷ ವೆಚ್ಚದ ಕಾಮಗಾರಿಗೆ ಭೂಮಿಪೂಜೆ ನಡೆಯಲಿದೆ. ಈ ಕಾಮಗಾರಿಗಳನ್ನು ಕರ್ನಾಟಕ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ನಿಗಮ (ಏಖಖಆಐ) ಅನುಷ್ಠಾನಗೊಳಿಸುತ್ತಿದೆ. ಜ. 17 ರಂದು ಮಧ್ಯಾಹ್ನ 3:30 ಗಂಟೆಗೆ ಉದ್ಘಾಟನೆ ನೆರವೇರಲಿದೆ.





ಬೆಟಗೇರಿಯಲ್ಲಿ ನಿರ್ಮಾಣಗೊಂಡಿರುವ ವಿದ್ಯಾರ್ಥಿ ವಸತಿ ನಿಲಯವನ್ನು 1,209 ಲಕ್ಷ ವೆಚ್ಚದಲ್ಲಿ ಲೋಕಾರ್ಪಣೆ ಮಾಡಲಾಗುತ್ತಿದ್ದು, ಮಧ್ಯಾಹ್ನ 1 ಗಂಟೆಗೆ ಉದ್ಘಾಟನೆ ನೆರವೇರಲಿದೆ.

ಹರ್ತಿ ಗ್ರಾಮದಲ್ಲಿ ಗರ್ಲ್ಸ್ ಮೊರಾರ್ಜಿ ದೇಸಾಯಿ ವಸತಿ ಶಾಲೆ (ಸಹಶಿಕ್ಷಣ) 1,000 ಲಕ್ಷ ವೆಚ್ಚದಲ್ಲಿ ಉದ್ಘಾಟನೆಯಾಗಲಿದೆ. ಜೊತೆಗೆ, ಹರ್ತಿ ಗ್ರಾಮದಲ್ಲೇ ನವೋದಯ ಮಾದರಿ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ನಿರ್ಮಾಣಕ್ಕೆ 2,000 ಲಕ್ಷ ವೆಚ್ಚದ ಕಾಮಗಾರಿಗೆ ಭೂಮಿ ಪೂಜೆ ನೆರವೇರಲಿದೆ. ಈ ಕಾಮಗಾರಿಗಳನ್ನು ಕರ್ನಾಟಕ ಹೌಸಿಂಗ್ ಬೋರ್ಡ್ (KHB) ಮೂಲಕ ಅನುಷ್ಠಾನಗೊಳಿಸಲಾಗಿದೆ. ಸಂಜೆ 4:30 ಗಂಟೆಗೆ ಉದ್ಘಾಟನೆ ನೆರವೇರಲಿದೆ.

ಈ ಕಾರ್ಯಕ್ರಮಗಳ ಮೂಲಕ ಗದಗ ಜಿಲ್ಲೆಯ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ, ಸುರಕ್ಷಿತ ವಸತಿ ಹಾಗೂ ಸಮಾನ ಅವಕಾಶಗಳು ದೊರೆಯಲಿದ್ದು, ಜಿಲ್ಲೆಯ ಶಿಕ್ಷಣ ಕ್ಷೇತ್ರದಲ್ಲಿ ಮಹತ್ವದ ಬದಲಾವಣೆಗೆ ಕಾರಣವಾಗಲಿದೆ.

ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಶಾಸಕ ಹಾಗೂ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ್ , ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್.ಪಾಟೀಲ, ಹಾವೇರಿ ಸಂಸದ ಹಾಗೂ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಸಂಸದ ಪಿ.ಸಿ.ಗದ್ದಿಗೌಡರ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷರಾದ ಡಿ.ಆರ್.ಪಾಟೀಲ, ನರಗುಂದ ಶಾಸಕ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ವಿಧಾನ ಪರಿಷತ್ ಶಾಸಕರುಗಳಾದ ಎಸ್.ವಿ.ಸಂಕನೂರ, ಪ್ರದೀಪ್ ಶೆಟ್ಟರ್, ಗದಗ-ಬೆಟಗೆರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕ್ಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾದ ಅಧ್ಯಕ್ಷ ಬಿ.ಬಿ.ಅಸೂಟಿ ಆಗಮಿಸುವರು.

ವಿಶೇಷ ಆಹ್ವಾನಿತರಾಗಿ ಯೋಜನೆ ಕಾರ್ಯಕ್ರಮಗಳು, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಕಾರ್ಯದರ್ಶಿಗಳು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತೆ ಶ್ರೀಮತಿ ಜಾನಕಿ ಕೆ.ಎಂ, ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸಿ.ಎನ್.ಶ್ರೀಧರ್ , ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಆಗಮಿಸಲಿದ್ದಾರೆ.

# ಸಚಿವ ಎಚ್ ಕೆ ಪಾಟೀಲರ ಜಿಲ್ಲಾ ಪ್ರವಾಸ


■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಅವರು ಗದಗ ಜಿಲ್ಲೆಯಲ್ಲಿ ಜನವರಿ 17 ರಂದು ಪ್ರವಾಸ ಕೈಗೊಳ್ಳಲಿದ್ದು, ವಿವರ ಇಂತಿದೆ.

ಬೆಳಗ್ಗೆ 9 ಗಂಟೆಗೆ ನಗರದ ಡಾ. ಪಂಡಿತ್ ಭೀಮ್ ಸೇನ್ ಜೋಶಿ ರಂಗಮಂದಿರದಲ್ಲಿ ಶ್ರೀ ಕೆ ಎಚ್ ಪಾಟೀಲ ಪ್ರತಿಷ್ಠಾನದಿಂದ ವಿದ್ಯಾರ್ಥಿಗಳಿಗೆ ಗಣಿತ ಬಾಲ ಭಾಸ್ಕರ ವಿಶೇಷ ಶಿಬಿರ ಕಾರ್ಯಕ್ರಮದ ಉದ್ಘಾಟನೆ ನೆರವೇರಿಸುವರು. ಬೆಳಗ್ಗೆ 9:30 ಗಂಟೆಗೆ ಶ್ರೀ ಜಗದ್ಗುರು ತೋಂಟದಾರ್ಯ ಪ್ರೌಢಶಾಲೆ ಗದಗನಲ್ಲಿ ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮಕ್ಕೆ ಚಾಲನೆ ನೀಡುವರು.

ಬೆಳಿಗ್ಗೆ 10:30 ಗಂಟೆಗೆ ಮುಂಡರಗಿಯ ಶ್ರೀ ಜಗದ್ಗುರು ಅನ್ನದಾನೇಶ್ವರ ಪದವಿ ಪೂರ್ವ ಮಹಾವಿದ್ಯಾಲಯದ ಆವರಣದಲ್ಲಿ ಶ್ರೀ ಜಗದ್ಗುರು ಅನ್ನದಾನೇಶ್ವರ ವಿದ್ಯಾ ಸಮಿತಿಯ ಶತಮಾನೋತ್ಸವ ಸಂಭ್ರಮದಲ್ಲಿ ಪಾಲ್ಗೊಳ್ಳುವರು.

ಮಧ್ಯಾಹ್ನ 2:30 ಗಂಟೆಗೆ ಗದಗ ನಗರದ ಗಂಗಿಮಡಿಯಲ್ಲಿ ಕರ್ನಾಟಕ ಮೌಲಾನ ಆಜಾದ್ ಮಾದರಿ ಶಾಲೆ (ಆಂಗ್ಲ ಮಾಧ್ಯಮ) ನೂತನ ಕಟ್ಟಡ ಉದ್ಘಾಟನೆ ಹಾಗೂ ಹೆಚ್ಚುವರಿ ತರಗತಿಗಳ ಕಟ್ಟಡದ ಶಂಕುಸ್ಥಾಪನೆ ಸಮಾರಂಭ ನೆರವೇರಿಸುವರು.



ಮಧ್ಯಾಹ್ನ 3 ಗಂಟೆಗೆ ನಗರದ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿನ ಜಿಲ್ಲಾ ಕಾಂಗ್ರೆಸ್ ಕಾರ್ಯಾಲಯಕ್ಕೆ ಅಲ್ಪಸಂಖ್ಯಾತ ಕಲ್ಯಾಣ ಸಚಿವರಾದ ಬಿ ಝಡ್ ಜಮೀರ್ ಅಹ್ಮದ್ ಖಾನ್ ಅವರೊಂದಿಗೆ ಭೇಟಿ ನೀಡುವರು.

ಮಧ್ಯಾಹ್ನ 3:30 ಗಂಟೆಗೆ ಬೆಟಗೇರಿಯ ಹಾಕಿ ಸ್ಟೇಡಿಯಂ ಹತ್ತಿರ ಸಮಾಜ ಕಲ್ಯಾಣ ಇಲಾಖೆಯಿಂದ ನಿರ್ಮಿಸಲಾದ ಮೆಟ್ರಿಕ್ ಪೂರ್ವ ವಸತಿ ನಿಲಯದ ಉದ್ಘಾಟನೆ ಸಮಾರಂಭದಲ್ಲಿ ಪಾಲ್ಗೊಳ್ಳುವರು, ಸಾಯಂಕಾಲ 4 ಗಂಟೆಗೆ ಬೆಟಗೇರಿ ಜುಮ್ಮಾ ಮಸೀದಿಗೆ ಭೇಟಿ ನೀಡುವರು.

ಸಾಯಂಕಾಲ 4:30 ಗಂಟೆಗೆ ಅಬ್ದುಲ್ ಕಲಾಂ ಶಾದಿ ಮಹಲ್ ಹತ್ತಿರದ ಅಲ್ಪಸಂಖ್ಯಾತರ ಸಾಮಾನ್ಯ ವಸತಿ ನಿಲಯದ ನೂತನ ಕಟ್ಟಡದ ಉದ್ಘಾಟನೆಯ ಸಮಾರಂಭದಲ್ಲಿ ಪಾಲ್ಗೊಳ್ಳುವರು.

ಸಾಯಂಕಾಲ 5 ಗಂಟೆಗೆ ಹರ್ತಿ ಗ್ರಾಮದಲ್ಲಿ ಹೆಣ್ಣು ಮಕ್ಕಳ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ನೂತನ ಕಟ್ಟಡ ಉದ್ಘಾಟನೆ ಹಾಗೂ ಅಲ್ಪಸಂಖ್ಯಾತರ ನವೋದಯ ಮಾದರಿ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಶಂಕುಸ್ಥಾಪನೆ ಸಮಾರಂಭದಲ್ಲಿ ಪಾಲ್ಗೊಳ್ಳುವರು.

ಸಾಯಂಕಾಲ 5:30 ಗಂಟೆಗೆ ಗದಗ ನಗರದ ಶ್ರೀ ವೀರ ನಾರಾಯಣ ವೀರನಾರಾಯಣ ದೇವಸ್ಥಾನ ರಸ್ತೆಯಲ್ಲಿ ಅಲ್ಪಸಂಖ್ಯಾತ ಕಲ್ಯಾಣ ಸಚಿವರಾದ ಬಿ ಝಡ್ ಜಮೀರ್ ಅಹ್ಮದ್ ಖಾನ್ ಅವರೊಂದಿಗೆ ಜುಮ್ಮಾ ಮಸೀದಿಗೆ ಭೇಟಿ ನೀಡುವರು.

ಸಾಯಂಕಾಲ 5:45 ಗಂಟೆಗೆ ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ಜಿಲ್ಲಾಧಿಕಾರಿಗಳೊಂದಿಗೆ ಸಭೆ ನಡೆಸುವರು. ರಾತ್ರಿ 8 ಗಂಟೆಗೆ ಗದಗನಿಂದ ರಸ್ತೆ ಮೂಲಕ ಹುಬ್ಬಳ್ಳಿಗೆ ತೆರಳಿ ಅಲ್ಲಿಂದ ಬೆಂಗಳೂರಿಗೆ ಪ್ರಯಾಣಿಸುವರು ಎಂದು ಸಚಿವರ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

# 'ಗಣಿತ ಬಾಲಭಾಸ್ಕರ' ತಾಲೂಕು ಮಟ್ಟದ ಪರೀಕ್ಷೆ 17ಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಪಂ. ಭೀಮಸೇನ ಜೋಷಿ ರಂಗಮಂದಿರದಲ್ಲಿ ಎಚ್.ಕೆ. ಪಾಟೀಲ ಪ್ರತಿಷ್ಠಾನ ಹಾಗೂ ಜಿಎನ್‌ಟಿಟಿಎಫ್, ಶಾಲಾ ಶಿಕ್ಷಣ ಇಲಾಖೆ ಸಹಯೋಗದಲ್ಲಿ ಗಣಿತ ಬಾಲಭಾಸ್ಕರ ತಾಲೂಕು ಮಟ್ಟದ ಪರೀಕ್ಷೆಯ ಉದ್ಘಾಟನಾ ಕಾರ್ಯಕ್ರಮ ಜ. 17ರಂದು ಬೆಳಿಗ್ಗೆ 9.30ಕ್ಕೆ ಜರುಗಲಿದೆ ಎಂದು ಜಿ.ಎನ್.ಟಿ.ಟಿ.ಎಫ್ ಅಧ್ಯಕ್ಷ ಕೃಷ್ಣಗೌಡ ಎಚ್.ಪಾಟೀಲ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಗಣಿತ ಬಾಲಭಾಸ್ಕರ ತಾಲೂಕು ಮಟ್ಟದ ಪರೀಕ್ಷೆ ಕಾರ್ಯಕ್ರಮವನ್ನು ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಉದ್ಘಾಟಿಸುವರು.

ಗಣಿತದ ಮೂಲ ಬೇರುಗಳು ಭಾರತದಲ್ಲಿಯೇ ಜನಿಸಿದ್ದು, ಆರ್ಯಭಟ, ಭಾಸ್ಕರರಂತಹ ಗಣಿತ ಪಂಡಿತರ ಜನ್ಮಭೂಮಿಯೂ ಭಾರತವಾಗಿದೆ. ಇಂತಹ ಗಣಿತ ಕೌಶಲ್ಯಗಳನ್ನು ಮಕ್ಕಳಲ್ಲಿ ಬೆಳೆಸುವ ನಿಟ್ಟಿನಲ್ಲಿ ಎಚ್.ಕೆ. ಪಾಟೀಲ ಪ್ರತಿಷ್ಠಾನ ಹಾಗೂ ಜಿ.ಎನ್.ಟಿ.ಟಿ.ಎಫ್, ಶಾಲಾ ಶಿಕ್ಷಣ ಇಲಾಖೆ ಸಹಯೋಗದೊಂದಿಗೆ ಕಳೆದ ಜ. 10ರಂದು ಗದಗ ತಾಲೂಕಾ ಶಹರ ಮತ್ತು ಗ್ರಾಮೀಣ ಭಾಗದ 140 ಶಾಲೆಗಳ 8 ಮತ್ತು 9ನೇ ತರಗತಿಯ ವಿದ್ಯಾರ್ಥಿಗಳಿಗೆ ಗಣಿತ ಬಾಲಭಾಸ್ಕರ ಪರಿಕ್ಷೆಯನ್ನು ಹಮ್ಮಿಕೊಳ್ಳಲಾಗಿತ್ತು.



ಈ ಪರೀಕ್ಷೆಯಲ್ಲಿ ಸುಮಾರು 13 ಸಾವಿರಕ್ಕಿಂತಲೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿ, ಅದರಲ್ಲಿ ಸುಮಾರು 1,500ಕ್ಕಿಂತಲೂ ಹೆಚ್ಚು ವಿದ್ಯಾರ್ಥಿಗಳು ಜ. 17ರಂದು ಜಿ.ಎನ್.ಟಿ.ಟಿ.ಎಫ್. ಕ್ಯಾಂಪಸ್‌ನಲ್ಲಿ ನಡೆಯುವ ಎರಡನೇ ಹಂತದ ತಾಲೂಕಾ ಮಟ್ಟದ ಪರೀಕ್ಷೆಗೆ ಆಯ್ಕೆಯಾಗಿದ್ದಾರೆ.

ಜ. 17ರಂದು ಬೆಳಿಗ್ಗೆ 11ರಿಂದ ಮಧ್ಯಾಹ್ನ 12ರವರೆಗೆ 8ನೇ ತರಗತಿ ಹಾಗೂ ಮಧ್ಯಾಹ್ನ 12ರಿಂದ 1ರವರೆಗೆ 9ನೇ ತರಗತಿಯ ವಿದ್ಯಾರ್ಥಿಗಳಿಗೆ ಪರೀಕ್ಷೆ ನಡೆಸಲಾಗುವುದು. ಜ. 24ರಂದು ಜಿ.ಎನ್.ಟಿ.ಟಿ.ಎಫ್ ಕ್ಯಾಂಪಸ್‌ನಲ್ಲಿ ಫೈನಲ್ ಪರೀಕ್ಷೆ ನಡೆಯುವುದು. ಈ ಕಾರ್ಯಕ್ರಮಕ್ಕೆ ಗದಗ ತಾಲೂಕಿನ ವಿವಿಧ ಭಾಗಗಳಿಂದ ಬರುವ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಬೆಟಗೇರಿ ಬಸ್ ನಿಲ್ದಾಣದಿಂದ ಗದಗ ಹಳೇ ಬಸ್ ನಿಲ್ದಾಣ ಹಾಗೂ ಮುಳಗುಂದ ನಾಕಾದಿಂದ ಜಿ.ಎನ್.ಟಿ.ಟಿ.ಎಫ್ ಕ್ಯಾಂಪಸ್‌ಗೆ ಬರಲು ಸಾರಿಗೆ ವ್ಯವಸ್ಥೆಯನ್ನು ಮಾಡಲಾಗಿದೆ.

ಪರೀಕ್ಷಾರ್ಥಿಗಳು ಇದರ ಸದುಪಯೋಗಪಡೆದುಕೊಳ್ಳಬೇಕು ಎಂದು ಜಿ.ಎನ್.ಟಿ.ಟಿ.ಎಫ್ ಅಧ್ಯಕ್ಷ ಕೃಷ್ಣಗೌಡ ಎಚ್.ಪಾಟೀಲ ತಿಳಿಸಿದ್ದಾರೆ.



ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿಯವರು ಇಂದು ಗದಗ ಜಿಲ್ಲೆಯ ಗಜೇಂದ್ರಗಢ ತಾಲೂಕಿನ ನರೇಗಲ್ಲಿನ ಅನ್ನದಾನೀಶ್ವರ ಕಿವುಡು ಮಕ್ಕಳ ಶಾಲೆಯ ವಿದ್ಯಾರ್ಥಿಗಳನ್ನು ಚನ್ನಪಟ್ಟಣದಲ್ಲಿ ಭೇಟಿ ಮಾಡಿದರು.

# ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನೆ ಸಭೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಟಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಎಸ್.ಆರ್.ಪಾಟೀಲ ಬ್ಯಾಡಗಿ ( ಬೆಳಗಾವಿ ಕಂದಾಯ ವಿಭಾಗದ ಉಸ್ತುವಾರಿ) ಇವರ ಅಧ್ಯಕ್ಷತೆಯಲ್ಲಿ ಜನವರಿ 17 ರಂದು ಬೆಳಿಗ್ಗೆ 11 ಗಂಟೆಗೆ ಗದಗ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಡಿಸೆಂಬರ 2025 ರ ಅಂತ್ಯದವರೆಗಿನ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಹಾಗೂ ಗದಗ ಜಿಲ್ಲಾ ಪಂಚ ಗ್ಯಾರಂಟಿ ಉತ್ಸವ/ ಕಾರ್ಯಾಗಾರ ನಡೆಸಲು ಉದ್ದೇಶಿಸಿರುವ ಪ್ರಯುಕ್ತ ಚರ್ಚಿಸಲು ಸಭೆಯನ್ನು ಏರ್ಪಡಿಸಲಾಗಿದೆ ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಸಮಿತಿಯ ಸದಸ್ಯ ಕಾರ್ಯದರ್ಶಿಗಳು ಹಾಗೂ ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ತಿಳಿಸಿದ್ದಾರೆ.

# ಕುಡುವಕ್ಕಲಿಗರ ಭವನ ರಾಜ್ಯದಲ್ಲಿಯೇ ಮಾದರಿಯಾಗಲಿ

▶▶ ಮೊದಲನೇ ಪುಟದಿಂದ

ಪ್ರದಾಧಿಕಾರಿಗಳು, ಸಮಾಜಬಾಂಧವರು ಔಪಚಾರಿಕವಾಗಿ ಏರ್ಪಡಿಸಿದ್ದ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ಕುಡುವಕ್ಕಲಿಗರ ಭವನಕ್ಕೆ ಈಗಾಗಲೇ ಹಂತ ಹಂತವಾಗಿ ಅನುದಾನ ಬಿಡುಗಡೆ ಮಾಡಿದ್ದು, ಈ ಮೊದಲು ಮಾತು ನೀಡಿದಂತೆ ಮುಖ್ಯಮಂತ್ರಿಗಳ ವಿಶೇಷ ಅನುದಾನದಿಂದ 28 ಲಕ್ಷ ರೂ.ಗಳನ್ನು ಬಿಡುಗಡೆ ಮಾಡಲಾಗಿದೆ. ಈ ಹಣ ಸದ್ಬಳಕೆ ಆಗಬೇಕಲ್ಲದೆ ಕಟ್ಟಡದ ಗುಣಮಟ್ಟ, ಸೌಲಭ್ಯಗಳು ಒಳ್ಳೆಯ ರೀತಿಯಿಂದ ಇರಬೇಕು. 2026ರ ಅಂತ್ಯದೊಳಗೆ ಉದ್ಘಾಟನೆಯಾಗುವಂತೆ ಕ್ರಮ ಜರುಗಿಸಿ. ಶೀಘ್ರದಲ್ಲಿಯೇ ಸ್ಥಳಕ್ಕೆ ಆಗಮಿಸಿ ಕಾರ್ಯ ಪ್ರಗತಿಯನ್ನು ನೋಡುವೆ ಎಂದರು.

ಗದುಗಿನ ಸಮಾಜ ಬಾಂಧವರಾದ ಪರಮೇಶ್ವರಪ್ಪ ಜಂತ್ಲಿ, ಸಿದ್ದರಾಮಪ್ಪ ಗೋಜನೂರ, ವಸಂತಪ್ಪ ಕನಾಜ ಹೊಂಬಳದ ಬಿ.ಎ. ತಿಮ್ಮಗೊಣ್ಣವರ, ಚಂದ್ರಶೇಖರ ರಾಜೂರ, ಗೋಳಪ್ಪ ಮಂಟೂರ, ಶಶಿಧರ ಕನಾಜ, ಶಿವಕುಮಾರ ರೋಣದ, ಪಿ.ಕೆ. ಹೊನ್ನಗಣ್ಣವರ, ಬೂದೇಶ ಮೈಲಾರ, ವ್ಹಿ.ಕೆ. ಬಳಗೇರ, ಎಸ್.ಎನ್. ದಿಡ್ಡಿಮನಿ, ಸೊರಟೂರಿನ ಶಂಕ್ರಣ್ಣ ಅಡ್ರಕಟ್ಟಿ, ಮಹಾದೇವಪ್ಪ, ಕರಿಯಪ್ಪ ಜಂಗವಾಡ, ಅರವೀಂದ್ರ ಗುಡಿ, ಶಿವಪ್ಪ ಹೊಳಗಿ, ಬಸವರಾಜ ಕೋಣನವರ, ರಮೇಶ ಓಂಕಾರಿ, ಶಿವಪ್ಪ ಮೇಗೂರ, ಮಹಾದೇವಪ್ಪ ಹೊಸಮನಿ ಮುಂತಾದವರು ಸಚಿವರನ್ನು ಸನ್ಮಾನಿಸಿ ಗೌರವಿಸಿದರು.

### 'ಮಹಾತ್ಮರ ಬದುಕು-ಬೆಳಕು' ಚಿಂತನಗೋಷ್ಠಿ ಉದ್ಘಾಟಿಸಿದ ಸಂಸದ ಬಸವರಾಜ ಬೊಮ್ಮಾಯಿ

# ಮಹಾತ್ಮರ ಬದುಕು ನಮಗೆಲ್ಲ ದಾರಿದೀಪ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಸಮಾಜದ ಬೆಳಕೇ ಆಗಿದ್ದ ಮಹಾತ್ಮರ ಆದರ್ಶ, ಮೌಲ್ಯ, ಚಿಂತನೆಗಳನ್ನು ಬದುಕಿನಲ್ಲಿ ಅಳವಡಿಸಿಕೊಂಡು ಬದುಕನ್ನು ಸಾರ್ಥಕಪಡಿಸಿಕೊಳ್ಳಬೇಕು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಲೋಕಸಭಾ ಸದಸ್ಯ ಬಸವರಾಜ ಬೊಮ್ಮಾಯಿ ಅಭಿಪ್ರಾಯಪಟ್ಟರು.

ಅವರು ಸಮೀಪದ ಹೂವಿನಶಿಗ್ಲಿ ಗ್ರಾಮದ ವಿರಕ್ತಮಠದ ಲಿಂ.ನಿರಂಜನ ಮಹಾಸ್ವಾಮಿಗಳ 16ನೇ ಪುಣ್ಯಸ್ಮರಣೋತ್ಸವ ಅಂಗವಾಗಿ ನಡೆಸಿದ 'ಮಹಾತ್ಮರ ಬದುಕು-ಬೆಳಕು' ಚಿಂತನಗೋಷ್ಠಿಯ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮಹಾತ್ಮರ ದಿವ್ಯ ಜ್ಞಾನ, ಅನುಭವ ಮತ್ತು ಸತ್ಸಂಗದಿಂದ ಸುಂದರ ಬದುಕು ಸಾಧ್ಯವಾಗುತ್ತದೆ. ಲಿಂ.ನಿರಂಜನ ಮಹಾಸ್ವಾಮಿಗಳಂತಹ ಮಹಾತ್ಮರ ಬದುಕು ನಮಗೆಲ್ಲ ದಾರಿದೀಪವಾಗಿದೆ. ಅವರು ಹಾಕಿಕೊಟ್ಟ ಮಾರ್ಗದಲ್ಲಿ ಈಗೀನ ಶ್ರೀಗಳು ಗುರುಕುಲದ ನೂರಾರು ಮಕ್ಕಳಿಗೆ ತ್ರಿವಿಧ ದಾಸೋಹ ಸೇವೆ ಮುಂದುವರೆಸಿಕೊಂಡು ಹೋಗುತ್ತಿರುವುದು ಶ್ಲಾಘನೀಯ. ಶ್ರೀಮಠದ ಶ್ರೇಯೋಭಿವೃದ್ಧಿಗಾಗಿ ಪ್ರಾಮಾಣಿಕ ಪ್ರಯತ್ನ ಮಾಡುವದಾಗಿ ಹೇಳಿದರು.



ಕುಂದಗೋಳ ಶ್ರೀ ಅಭಿನವ ಬಸವಣ್ಣಜ್ಜನವರು, ನವಲಗುಂದದ ಶ್ರೀ ಬಸವಲಿಂಗ ಮಹಾಸ್ವಾಮಿಗಳು, ಗುಡ್ಡದ ಆನ್ವೇರಿ ಶ್ರೀ ಶಿವಯೋಗಿಶ್ವರ ಮಹಾಸ್ವಾಮಿಗಳು, ಹಿರೇಮಲ್ಲನಕೇರಿಯ ಚನ್ನಬಸವ ಮಹಾಸ್ವಾಮಿಗಳು, ಕಮಡೊಳ್ಳಿಯ ಶ್ರೀ ರಾಚೋಟೇಶ್ವರ ದೇವರು ಸಾನ್ನಿಧ್ಯ ವಹಿಸಿದ್ದರು. ಮುಖಂಡರುಗಳಾದ ಗವಿಸಿದ್ದಪ್ಪ ದ್ಯಾಮಣ್ಣವರ, ಮಂಜುನಾಥ ಮಾಗಡಿ, ನಾಗರಾಜ ಚಿಂಚಲಿ, ಶಿವಪುತ್ರಪ್ಪ ಕಲಕೋಟಿ, ಬಸವರಾಜ ಕೋಳಿವಾಡ, ಬಸವರಾಜ ಗಾಂಜಿ, ಪುಲಕೇಶಿ ಉಪನಾಳ, ಶಿವಪ್ರಕಾಶ ಲಿಂಬಯ್ಯಸ್ವಾಮಿಮಠ, ಬಸವೇಶ ಮಹಾಂತಶೆಟ್ಟರ, ನಾಯಿಕೆರೂರು ಗ್ರಾಮದ ಸದ್ಭಕ್ತರು ಸೇರಿದಂತೆ ಹಲವಾರು ಪ್ರಮುಖರು ಉಪಸ್ಥಿತರಿದ್ದರು.

ಈಶ್ವರ ಮೆಡ್ಲೇರಿ ನಿರೂಪಿಸಿದರು. ಕೆ.ಎಸ್. ಇಟಗಿಮಠ, ರೇಣುಕಗೌಡ ಪಾಟೀಲ, ಶಿವಾನಂದ ಕಟ್ಟಿಮನಿ, ಶರಸೂರಿ, ಮಹಾದೇವ ಬಿಷ್ಟಣ್ಣವರ ನಿರ್ವಹಿಸಿದರು.

ನೇತೃತ್ವವಹಿಸಿದ್ದ ಹೂವಿನಶಿಗ್ಲಿಯ ಚನ್ನವೀರ ಮಹಾಸ್ವಾಮಿಗಳು ಮಾತನಾಡಿ, ಮನುಷ್ಯನ ಜನ್ಮ ದೇವರು ಕೊಟ್ಟ ಭಾಗ್ಯ ಮತ್ತು ಸತ್ಕಾರ್ಯ ಮಾಡಲೊಂದು ಅವಕಾಶ. ನಿತ್ಯ ಜೀವನದ ಹೋರಾಟ, ಜಂಜಾಟಗಳ ನಡುವೆಯೂ ಕೈಲಾದ ಮಟ್ಟಿಗೆ ಧರ್ಮ, ಶಿಕ್ಷಣ, ಸಾಮಾಜಿಕ ಸೇವೆ ಮಾಡಬೇಕು ಎಂಬುದು ಲಿಂ.ಶ್ರೀಗಳ ಇಚ್ಛೆಯಾಗಿತ್ತು. ಶ್ರೀಮಠದಲ್ಲಿ ನಿತ್ಯ ನೂರಾರು ಮಕ್ಕಳಿಗೆ ವಿದ್ಯಾದಾನ, ಅನ್ನದಾನ ಸೇವೆ ನಡೆಸುವದಕ್ಕೆ ಭಕ್ತರು ನೀಡುತ್ತಿರುವ ಸಹಕಾರ ಅಪಾರವಾಗಿದೆ. ಲಕ್ಷ್ಮೇಶ್ವರದಲ್ಲಿ ಶ್ರೀಮಠದ ಧಾರ್ಮಿಕ ಪಾಠಶಾಲೆ ನಿರ್ಮಿಸಲಾಗುತ್ತಿದ್ದು, ಭಕ್ತರು ಕೈಜೋಡಿಸುವಂತೆ ತಿಳಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka